ವಿಜಯಪುರ | ಸಂಪುಟ 02 | ಸಂಚಿಕೆ 198 | ಪುಟ 4 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಮಂಗಳವಾರ, ಅಕ್ಟೋಬರ್ 01, 2024

"ರಾಜ್ಯದ 742 ಗ್ರಾಮಗಳಲ್ಲಿ ವಾಸಿಸುವ ಗಡಿನಾಡ ಕನ್ನಡಿಗರ ಸಮಸ್ಯೆಗಳಿಗೆ ಸ್ಪಂದಿಸಿ, ಅವರ ಗ್ರಾಮಗಳಲ್ಲಿ ಅಗತ್ಯವಿರುವ ರಸ್ತೆ, ನೀರು, ಬಸ್ ಸೌಕರ್ಯ, ಶಿಕ್ಷಣ ಸೇರಿದಂತೆ ಮೂಲ ಸೌಲಭ್ಯಗಳನ್ನು ಕಲ್ಪಿಸುವ ಕುರಿತು ಪ್ರಾಮಾಣಿಕವಾಗಿ ಪ್ರಯತ್ನಿಸಲಾಗುವುದು."



■ **ಶಿವರಾಜ್ ಎಸ್.ತಂಗಡಗಿ**
ಸಚಿವರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ

## ಮನೆಗಳ ತೆರವಿಗೆ ತಡೆ ಕೋರಿ ಕೊಳಗೇರಿ ನಿವಾಸಿಗಳ ಪ್ರತಿಭಟನೆ



■ ಉದಯರಶ್ಮಿ ದಿನಪತ್ರಿಕೆ

ಮುದ್ದೇಬಿಹಾಳ: ಪಟ್ಟಣದ ಇಂದಿರಾ ನಗರದ ನಿವಾಸಿಗಳು ತಮ್ಮ ತಗಡಿನ ಮನೆಗಳನ್ನು ತೆರವು ಮಾಡುವುದನ್ನು ತಡೆಹಿಡಿಯಬೇಕೆಂದು ಒತ್ತಾಯಿಸಿ ತಹಶೀಲ್ದಾರ ಕಚೇರಿಯ ಎದುರು, ಕೊಳಗೇರಿ ಅಭಿವೃದ್ಧಿ ಮಂಡಳಿ ನೀಡಿದ ಹಕ್ಕುಪತ್ರ ಹಿಡಿದು ದಿಢೀರ ಪ್ರತಿಭಟನೆ ನಡೆಸಿ ತಹಶೀಲ್ದಾರರಿಗೆ ಮನವಿ ಸಲ್ಲಿಸಿದರು.

ಈ ವೇಳೆ ನಿವಾಸಿಗಳಾದ ರಾಮು ದಳವಾಯಿ ಮಾತನಾಡಿ, ಕೊಳಗೇರಿ ಅಭಿವೃದ್ಧಿ ಮಂಡಳಿಯವರು ಮತ್ತು ಪುರಸಭೆಯವರು ಜಂಟಿಯಾಗಿ ಸರ್ವೇ ಮಾಡಿ ನಮಗೆ ಕೊಳಗೇರಿ ಅಭಿವೃದ್ಧಿ ಮಂಡಳಿಯಿಂದ ಮನೆಗಳನ್ನು ನೀಡಲಾಗಿದೆ. ಸುಮಾರು ವರ್ಷಗಳಿಂದ ನಾವು ಇಲ್ಲಿ ವಾಸವಿದ್ದೇವೆ. ಸಧ್ಯ ಪುರಸಭೆ ಮುಖ್ಯಾಧಿಕಾರಿಗಳು ದಿಢೀರನೆ ಬಂದು ಮಂಡಳಿ ನೀಡಿದ ಹಕ್ಕು ಪತ್ರಗಳನ್ನೂ ಸಹ ಗಮನಿಸಿದೇ ನಿಮ್ಮ ತಗಡಿನ ಮನೆಗಳು ಅನಧಿಕೃತವಾಗಿವೆ. ಕೂಡಲೇ ಖಾಲಿ ಮಾಡಿ ಇಲ್ಲದಿದ್ರೆ ತೆರವುಗೊಳಿಸುವದಾಗಿ ತಿಳಿಸಿದ್ದಾರೆ. ಈ ನಡೆಯನ್ನು ನಾವು ಖಂಡಿಸುತ್ತೇವೆ. ಕೊಳಗೇರಿ ಅಭಿವೃದ್ಧಿ ಮಂಡಳಿ ನೀಡಿದ ಹಕ್ಕುಪತ್ರವನ್ನು ಗಮನಿಸದೇ, ಯಾವ ನೋಟೀಸನ್ನೂ ನೀಡದೇ ನಮ್ಮ ಮನೆಗಳನ್ನು ತೆರವುಗೊಳಿಸಲು ಹುನ್ನಾರ ನಡೆಸಿರುತ್ತಾರೆ. ಕೂಡಲೇ ಈ ದಬ್ಬಾಳಿಕೆಯನ್ನು ಕೈಬಿಡಬೇಕು. ಇಲ್ಲದೇ ಹೋದಲ್ಲಿ ಮುಂದಿನ ದಿನಗಳಲ್ಲಿ ನಾವೆಲ್ಲರೂ ಬೀದಿಗಿಳಿದು ಉಗ್ರ ಹೋರಾಟ ನಡೆಸುತ್ತೇವೆ ಎಂದರು.

ಈ ವೇಳೆ ಪರಶುರಾಮ ದಳವಾಯಿ, ಸಿದ್ದು ಬಂಟನೂರ ಮಾತನಾಡಿ ಪುರಸಭೆ ಮುಖ್ಯಾಧಿಕಾರಿಗಳು ದಿಢೀರನೆ ಬಂದು ನಮ್ಮ ತಗಡಿನ ಮನೆಗಳನ್ನು ತೆರವುಗೊಳಿಸುವದಾಗಿ ತಿಳಿಸಿರುತ್ತಾರೆ. ಇದರಿಂದ ನಮ್ಮ ಮನೆಯ ಹೆಣ್ಣುಮಕ್ಕಳು ಕಂಗಾಲಾಗಿ ಊಟ ನೀರು ಬಿಟ್ಟು ಕುಳಿತಿದ್ದಾರೆ. ಮುಖ್ಯಾಧಿಕಾರಿಗಳನ್ನು ಬೇಟಿ ಮಾಡಲು ಪುರಸಭೆಗೆ ತೆರಳಿದ್ದೆವು. ಅವರಿಲ್ಲದ ಕಾರಣ ತಹಶೀಲ್ದಾರ ಕಚೇರಿಯ ಎದುರು ಹೋರಾಟ ನಡೆಸಿ ಮನವಿ ಸಲ್ಲಿಸುತ್ತಿದ್ದೇವೆ. ನಮಗೆ ವಾಸಕ್ಕೆ ಈ ಮನೆಗಳನ್ನು ಬಿಟ್ಟರೇ ಬೇರೆ ಯಾವುದೇ ಮನೆಯಿಲ್ಲ. ಕಡುಬಡವರಾದ ನಮ್ಮ ಕಷ್ಟಕ್ಕೆ ಹಿರಿಯ ಅಧಿಕಾರಿಗಳು ಕೂಡಲೇ ಸ್ಪಂದಿಸಬೇಕು ಎಂದರು.

2021 ರಲ್ಲಿ ಸ್ಲಂ ಬೋರ್ಡ ಅಧಿಕಾರಿಗಳು ಮತ್ತು ಪುರಸಭೆ ಅಧಿಕಾರಿಗಳೂ ಜಂಟಿ ಸರ್ವೇ ಕೈಗೊಂಡು ಕರ್ನಾಟಕ ಸರಕಾರದ ಸಚಿವಾಲಯ ನಗರಾಭಿವೃದ್ಧಿ ಇಲಾಖೆಯ ಆದೇಶದಂತೆ ಸಂಖ್ಯೆ: ನಇ 73 ಜೆಇಎಲ್–2020 ದಿನಾಂಕ 18–02–2021 ರ ಆದೇಶಂತೆ ನಮ್ಮಿಂದ ಹಣವನ್ನು ಭರಣೆ ಮಾಡಿಕೊಂಡು ನಮಗೆ ಹಕ್ಕು ಪತ್ರ ವಿತರಿಸಿದ್ದು ಮತ್ತು ನೋಂದಣಿ ಪತ್ರವನ್ನು ನೀಡಿದ್ದು ಉತಾರಾ ನೀಡಲು ಅರ್ಜಿ ಸಹ ನೀಡಿರುತ್ತೇವೆ. ಕೂಲಿ ನಾಲಿ ಮಾಡಿ ಬದುಕುವ ಪರೀಸ್ಥಿತಿ ನಮ್ಮದಾಗಿದ್ದು ಈ ಮನೆಗಳನ್ನು ತೆರವುಗೊಳಿಸಿದರೆ ನಮಗೆ ವಾಸಿಸಲು ಯಾವುದೇ ಸೂರುಗಳಿಲ್ಲ. ಕಾರಣ ಹಕ್ಕು ಪತ್ರಗಳನ್ನು ಪರಿಶೀಲಿಸಿ ನಮಗೆ ತೊಂದರೆಯಾಗದಂತೆ ನೋಡಿಕೊಳ್ಳಬೇಕೆಂದು ವಿನಂತಿಸುತ್ತೇವೆ ಎಂದು ಮನವಿ ಪತ್ರದಲ್ಲಿ ಉಲ್ಲೇಖಿಸಲಾಗಿದೆ.

ಪ್ರತಿಭಟನೆಯಲ್ಲಿ ಎಂ.ಡಿ.ಉಪ್ಪಲದಿನ್ನಿ, ಸೀತಾರಾಮ ತಳ್ಳಿ, ಎಚ್.ಆರ್.ಕುಂಟೋಜಿ, ಸೂರೆ ಮುರಾಳ, ಪಿ.ಎಂ.ಚಲವಾದಿ, ಫರಜಾನ, ಎಸ್.ಬಿ.ಬೂದಿಹಾಳ, ನಿಂಗವ್ವ, ಅಶ್ವಿನಿ ಚಲವಾದಿ, ಭಾಗಮ್ಮ ಬಿರಾದಾರ, ಮಲ್ಲಮ್ಮ ಇಸ್ಲಾಂಪೂರ, ರವಿ ಚಲವಾದಿ, ಶಂಕ್ರಪ್ಪ ಮಾದರ, ಅಶೋಕ ಬಿರಾದಾರ, ಹನೀಫ ಮುಲ್ಲಾ, ಶಂಕ್ರಪ್ಪ ಮಾದರ, ಬಾಬರ ಶಹಾಪೂರ, ಆಸೀಫ ಕುಂಟೋಜಿ ಸೇರಿದಂತೆ ಮತ್ತಿತರರು ಇದ್ದರು.

## ಗಡಿ ಕನ್ನಡಿಗರ ಸಮಸ್ಯೆಗಳ ಪರಿಹಾರಕ್ಕೆ ಬದ್ಧ: ಸಚಿವ ತಂಗಡಗಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ರಾಜ್ಯದ 742 ಗ್ರಾಮಗಳಲ್ಲಿ ವಾಸಿಸುವ ಕನ್ನಡಿಗರ ಸಮಸ್ಯೆ ನಮ್ಮ ಸಮಸ್ಯೆ, ಗಡಿನಾಡ ಕನ್ನಡಿಗರ ಸಮಸ್ಯೆಗಳಿಗೆ ಸ್ಪಂದಿಸಿ, ಕನ್ನಡಿಗರು ವಾಸಿಸುವ ಗ್ರಾಮಗಳಲ್ಲಿ ಅಗತ್ಯವಿರುವ ರಸ್ತೆ, ನೀರು, ಬಸ್ ಸೌಕರ್ಯ, ಶಿಕ್ಷಣ ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವ ಕುರಿತು ಮುಖ್ಯಮಂತ್ರಿಗಳ ಗಮನಕ್ಕೆ ತಂದು ಪ್ರಾಮಾಣಿಕವಾಗಿ ಪ್ರಯತ್ನಿಸಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಖಾತೆ ಸಚಿವರಾದ ಶಿವರಾಜ್ ಎಸ್.ತಂಗಡಗಿ ಅವರು ಭರವಸೆ ನೀಡಿದರು.



ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾಡಳಿತ ವಿಜಯಪುರ, ಗುಡ್ಡಾಪುರ ದಾನಮ್ಮದೇವಿ ದೇವಸ್ಥಾನ ಟ್ರಸ್ಟ ಕರ್ನಾಟಕ ಹಾಗೂ ಮಹಾರಾಷ್ಟ್ರ ರಾಜ್ಯದ ಕನ್ನಡ ಸಂಘಟನೆಗಳ ಸಹಯೋಗದಲ್ಲಿ ಸಾಂಗ್ಲಿ ಜಿಲ್ಲೆಯ ಜತ್ತ ತಾಲೂಕಿನ ಗುಡ್ಡಾಪುರದಲ್ಲಿ ಸೋಮವಾರ ಹಮ್ಮಿಕೊಂಡ ಕರ್ನಾಟಕ ಸಂಭ್ರಮ–50, ಗಡಿನಾಡ ಚೇತನ ರಾಜ್ಯ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ, ಕರ್ನಾಟಕ ಗಡಿ ಪ್ರಾಧಿಕಾರದ ಲಾಂಛನ ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ರಾಜ್ಯದಲ್ಲಿಯೇ ಮೊಟ್ಟಮೊದಲ ಬಾರಿಗೆ ಇಂತಹ ವಿಶೇಷ ಕಾರ್ಯಕ್ರಮ ಆಯೋಜನೆ ಮಾಡಲಾಗಿದೆ. ಇದಕ್ಕೂ ಮುನ್ನ ಸಾಹಿತಿಗಳು ತಮ್ಮ ವಿಚಾರಗಳನ್ನು ಅಭಿವ್ಯಕ್ತಪಡಿಸಲು ಮುಕ್ತ ಅವಕಾಶವನ್ನು ನೀಡಿ ಮೈಸೂರಿನಲ್ಲಿ ಸಾಹಿತಿಗಳ ಚಿಂತನಾ ಸಮಾವೇಶ ಯಶಸ್ವಿಯಾಗಿ ಹಮ್ಮಿಕೊಳ್ಳಲಾಗಿದೆ. ಕರ್ನಾಟಕ ಹಾಗೂ ಮಹಾರಾಷ್ಟ್ರ ಗಡಿ ಭಾಗದಲ್ಲಿ ಪರಸ್ಪರ ಅನ್ಯೂನ್ಯ, ಪ್ರೀತಿ, ವಿಶ್ವಾಸ ಬೆಳೆಸಿ, ಉಭಯ ರಾಜ್ಯದ ಜನರು ಸಾಮರಸ್ಯದಿಂದ ಬದುಕಲು ಗಡಿಭಾಗದಲ್ಲಿ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಅವರು ಹೇಳಿದರು.

"ಕನ್ನಡಿಗರು ಸೋಲಾಪುರ, ಸಾಂಗ್ಲಿ ಸೇರಿದಂತೆ ದೇಶದ ಯಾವ ಮೂಲೆಯಲ್ಲಾದರೂ ವಾಸಿಸಿದರೂ ಕನ್ನಡಿಗರ ಸಮಸ್ಯೆಗಳಿಗೆ ನಮ್ಮ ಸರ್ಕಾರ ಸದಾ ಸ್ಪಂದಿಸಲಿದೆ. ಕರ್ನಾಟಕ–ಆಂಧ್ರ ಹಾಗೂ ಮಹಾರಾಷ್ಟ್ರ ರಾಜ್ಯಗಳು ಒಂದಾಗಿ ಪರಸ್ಪರ ಸಮನ್ವಯತೆಯಿಂದ ನಿರ್ಧಾರ ಕೈಗೊಂಡು ಕೃಷ್ಣಾ ನೀರನ್ನು ಬಳಕೆ ಮಾಡಿಕೊಂಡಲ್ಲಿ ಐತಿಹಾಸಿಕವಾಗಲಿದೆ. ಇಡಿ ದೇಶಕ್ಕೆ ಮಾದರಿಯಾಗಲಿದೆ. ಪ್ರತಿ ವರ್ಷ 300 ರಿಂದ 500 ಟಿಎಂಸಿ ಸಮುದ್ರ ಪಾಲಾಗುವ ನೀರು ಬಳಕೆಮಾಡಿಕೊಂಡಲ್ಲಿ ಕುಡಿಯುವ ನೀರಿನ ಸಮಸ್ಯೆ ಪರಿಹಾರವಾದಂತಾಗುತ್ತದೆ. ಈ ನಿಟ್ಟಿನಲ್ಲಿ ಮೂರು ಸರ್ಕಾರಗಳು ಚಿಂತನೆ ನಡೆಸುವ ಅವಶ್ಯಕತೆ ಇದೆ."



■ **ಶಿವಾನಂದ ಪಾಟೀಲ**
ಸಚಿವರು, ಜವಳಿ, ಕಬ್ಬು ಮತ್ತು ಸಕ್ಕರೆ, ಕೃಷಿ ಮಾರುಕಟ್ಟೆ

### ಅದ್ದೂರಿಯಾಗಿ ಜರುಗಿದ ಗಡಿ ಕನ್ನಡಿಗರ ಸಮಾವೇಶ। ಗಡಿನಾಡ ಚೇತನ ಪ್ರಶಸ್ತಿ ಪ್ರದಾನ

ಸಮಾವೇಶದಲ್ಲಿ ಮಹಾರಾಷ್ಟ್ರ ಕನ್ನಡಿಗರಿಂದ ಬೇಡಿಕೆಗಳನ್ನು ಸಲ್ಲಿಸಿ, ಉದ್ಯೋಗದಲ್ಲಿ ಭದ್ರತೆ, ಅಂಗನವಾಡಿಗಳಲ್ಲಿ ಕನ್ನಡ ಆದ್ಯತೆ, ಸರ್ಕಾರಿ ಪ್ರೌಢಶಾಲೆ ಆರಂಭ, ಗಡಿ ಭಾಗದ–ಮಹಾರಾಷ್ಟ್ರದ ಕನ್ನಡ ಶಾಲೆಗಳಲ್ಲಿ ಕನ್ನಡ ಶಿಕ್ಷಕರ ನೇಮಕ, ಕನ್ನಡದಲ್ಲಿ ಟಿಇಟಿ ಪರೀಕ್ಷೆ ಬರೆಯಲು ಅವಕಾಶ ನೀಡಲು ಮಹಾರಾಷ್ಟ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡುವುದು, ಕನ್ನಡ ಶಾಲೆಗಳಿಗೆ ಕನ್ನಡ ಸಾಹಿತ್ಯಿಕ ಪುಸ್ತಕಗಳು, ಪರಿಕರಗಳನ್ನು ಒದಗಿಸುವುದು, ಮಹಾರಾಷ್ಟ್ರ ರಾಜ್ಯದ ವಿವಿಧ ನಗರಗಳಲ್ಲಿ ಕನ್ನಡ ಭವನ ನಿರ್ಮಾಣ, ನವೋದಯ, ಮೊರಾರ್ಜಿ ಶಾಲೆಗಳಲ್ಲಿ ಗಡಿ ಕನ್ನಡಿಗರ ಪ್ರವೇಶಕ್ಕೆ ಆದ್ಯತೆ, ಉಚಿತ ಸಾರಿಗೆ ಸೌಕರ್ಯ ಸೇರಿದಂತೆ ಗಡಿನಾಡಿನಲ್ಲಿ ಕನ್ನಡ, ಕಲೆ, ಸಾಹಿತ್ಯ, ಸಂಸ್ಕೃತಿಯನ್ನು ಪ್ರೋತ್ಸಾಹಿಸಲು ಸಚಿವರಿಗೆ ಮನವಿ ಮಾಡಿಕೊಂಡ ಹಿನ್ನಲೆಯಲ್ಲಿ ಈ ಎಲ್ಲ ಬೇಡಿಕೆಗಳನ್ನು ಹಂತ–ಹಂತವಾಗಿ ಈಡೇರಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸಲಾಗುವುದು ಎಂದು ಅವರು ಹೇಳಿದರು.

ಜವಳಿ, ಕಬ್ಬು ಮತ್ತು ಸಕ್ಕರೆ, ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಎಸ್.ಪಾಟೀಲ ಅವರು, ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರದ ಸಾಕ್ಷ್ಯಚಿತ್ರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಬಹಳ ದಿನಗಳ ನಂತರ ಗಡಿಭಾಗದಲ್ಲಿ ಇಂತಹ ಸಾಮರಸ್ಯ ಮೂಡಿಸುವ ಐತಿಹಾಸಿ ಕಾರ್ಯಕ್ರಮ ಆಯೋಜನೆ ಮಾಡಲಾಗಿದೆ. ಭಾಷೆ ಬೇರೆ–ಬೇರೆಯಾಗಿದ್ದರೂ ಸಹ ಮನಸ್ಸು ಒಂದೇ ಆಗಿದೆ. ಪ್ರತಿಯೊಬ್ಬರು ನಾವು ಭಾರತೀಯರು ಎಂಬ ಸಂದೇಶ ಸಾರಬೇಕು ಎಂದು ಹೇಳಿದರು.

ಸಮಾವೇಶದಲ್ಲಿ ಸಾಂಗ್ಲಿ ಜಿಲ್ಲೆಯ ಜತ್ತ ಶಾಸಕ ವಿಕ್ರಮಸಿಂಹ ಬಾಳಾಸಾಹೇಬ ಸಾವಂತ ಮಾತನಾಡಿದರು.

ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸೋಮಣ್ಣ ಬೇವಿನಮರದ ಪ್ರಾಸ್ತಾವಿಕವಾಗಿ ಮಾತನಾಡಿದರು.

ಸಮಾವೇಶದಲ್ಲಿ ಕನ್ನಡ ಶಾಲೆ ವಿದ್ಯಾರ್ಥಿಗಳಿಗೆ ನಲಿ–ಕಲಿ ಕಲಿಕಾ ಸಾಮಗ್ರಿಗಳನ್ನು ವಿತರಿಸಲಾಯಿತು. ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದಿಂದ ಹೊರ ತಂದಿರುವ ಗಡಿಯಲ್ಲಿ ಭಾಷಾ ಸಾಮರಸ್ಯ ಪುಸ್ತಕ ಬಿಡುಗಡೆ ಮಾಡಲಾಯಿತು. 2023–24ನೇ ಸಾಲಿನ ಹಾಗೂ 2024–25ನೇ ಸಾಲಿನ ಗಡಿ ಪ್ರಾಧಿಕಾರದಿಂದ ನೀಡುವ ಗಡಿನಾಡ ಚೇತನ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಕೌಶಲ್ಯಾಭಿವೃದ್ಧಿ ನಿಗಮದ ಅಧ್ಯಕ್ಷರಾದ ಶ್ರೀಮತಿ ಕಾಂತಾ ನಾಯ್ಕ, ಬಾಲ ವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ, ಜಿಲ್ಲಾಧಿಕಾರಿ ಟಿ.ಭೂಬಾಲನ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ, ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಪ್ರಕಾಶ ಮತ್ತಿಹಳ್ಳಿ, ದಾನಮ್ಮದೇವಿ ಟ್ರಸ್ಟ ಅಧ್ಯಕ್ಷ ವಿಜುಗೌಡ ಪಾಟೀಲ, ಎಂ.ಎಸ್.ಮದಭಾವಿ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಹಾಶಿಂಪೀರ ವಾಲೀಕಾರ, ಸೇರಿದಂತೆ ವಿವಿಧ ಅಕಾಡೆಮಿಗಳ ಅಧ್ಯಕ್ಷರು, ಸದಸ್ಯರು, ಇತರರು ಉಪಸ್ಥಿತರಿದ್ದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕರಾದ ಧರಣಿದೇವಿ ಮಾಲಗತ್ತಿ ಸ್ವಾಗತಿಸಿದರು.

## ಕನಿಷ್ಠ ಪಿಂಚಣಿ ಹೆಚ್ಚಳಕ್ಕಾಗಿ ಪಿಂಚಣಿದಾರರ ಪ್ರತಿಭಟನೆ




■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಇ.ಪಿ.ಎಸ್– 95 ಪಿಂಚಣಿದಾರರು, ರಾಷ್ಟ್ರೀಯ ಸಂಘರ್ಷ ಸಮಿತಿಯ ಕರೆಯ ಮೇರೆಗೆ ವಿಜಯಪುರದ ಭವಿಷ್ಯ ನಿಧಿ ಕಛೇರಿ ಎದುರು ಸುಮಾರು 500 ಕ್ಕಿಂತ ಹೆಚ್ಚು ಜನ ಸೇರಿ ಕನಿಷ್ಠ ಪಿಂಚನ ಹೆಚ್ಚಳಕ್ಕಾಗಿ ಬೃಹತ್ ಪ್ರತಿಭಟನೆ ನಡೆಸಿದರು. ಇ.ಪಿ.ಎಸ್–95 ಪಿಂಚಣಿದಾರರು ಕಳೆದ 10 –12 ವರ್ಷಗಳಿಂದ ನಿರಂತರವಾಗಿ ಹೋರಾಟ ನಡೆಸುತ್ತಿದ್ದು, ಮಹಾರಾಷ್ಟ್ರದ ಬುಲ್ಡಾನಾದಲ್ಲಿ ಸರತಿ ಉಪವಾಸ ಸತ್ಯಾಗ್ರಹ ಇಂದಿಗೆ 2098 ದಿನಕ್ಕೆ ಕಾಲಿಟ್ಟರೂ ಕೇಂದ್ರ ಸರ್ಕಾರ ಹುಸಿ ಭರವಸೆಗಳನ್ನು ಕೊಡುತ್ತಾ ಕಾಲಹರಣ ಮಾಡುತ್ತಿದೆ ಎಂದು ಎನ್.ಎ.ಸಿ. ವಿಜಯಪುರ ಅಧ್ಯಕ್ಷ ಎಸ್.ಜೆ.ಗೌಡರ ಮಾತನಾಡಿದರು.

ಇದುವರೆಗೆ ಕನಿಷ್ಠ ಪಿಂಚಣಿ ರೂ.7500+ಡಿ. ಹಾಗೂ ಉಚಿತ ವೈದ್ಯಕೀಯ ಚಿಕಿತ್ಸೆ ಸೌಲಭ್ಯ ಬೇಡಿಕೆಯನ್ನು ಸರ್ಕಾರ ಇ.ಪಿ.ಎಫ್.ಓ, ಈಡೇರಿಸುತ್ತಿಲ್ಲ . ಪಿಂಚಣಿದಾರರ ಬವಣೆ ಹೇಳತೀರದ್ದು ಆಗಿದೆ. ಸೇವಾವಧಿಯಲ್ಲಿ ವಂತಿಗೆ ಕೊಟ್ಟು ಯೋಗ್ಯ ಪಿಂಚನೆ ಇಲ್ಲದೇ ಪಿಂಚಣಿದಾರ ಕಠಿಣ ಪರಿಸ್ಥಿತಿಯನ್ನು ಎದುರಿಸುತ್ತಿದ್ದಾರೆ. ಸರ್ಕಾರ ಬೇಗನೆ ಬೇಡಿಕೆಯನ್ನು ಈಡೇರಿಸಿ ವೃದ್ಧರನ್ನು ಗೌರವಯುತ ಜೀವನವನ್ನು ನಡೆಸಲು ಅನುಕೂಲ ಮಾಡಿಕೊಡಬೇಕೆಂದು ನ್ಯಾಮ್ಸ್ ನೇತಾರ ಎಂ.ಎ.ಮುಲ್ಲಾ ಹೇಳಿದರು.

ರಾಷ್ಟ್ರೀಯ ಸಂಘರ್ಷ ಸಮಿತಿಯ ಕರ್ನಾಟಕ ರಾಜ್ಯದ ಉಪಾಧ್ಯಕ್ಷ ವೀರಕುಮಾರ ಗಡಾದ ಮಾತಾನಾಡುತ್ತಾ, ಮೋದಿಯವರ ಸರ್ಕಾರ ಈಗಲಾದರೂ ಎಚ್ಚೆತ್ತು ವೃದ್ಧ ಪಿಂಚಣಿದಾರರ ಬೇಡಿಕೆಯನ್ನು ಈಡೇರಿಸಲೆಂದು ಆಗ್ರಹಿಸಿದರು.

ಎನ್.ಇ.ಸಿ. ಕಾರ್ಯದರ್ಶಿ ಆರ್.ಎ.ಪನಿಬಂಧ, ಎ.ಆಯ್.ಟಿ.ಯು.ಸಿ.ಮುಖಂಡ ಗೋಪಾಲ ಬಿರಾದಾರ ಮಾತನಾಡಿದರು. ಬಳಿಕ ಇ.ಪಿ.ಎಫ್.ಓ.ಕಛೇರಿಯಲ್ಲಿ ಅಧಿಕಾರಿಗಳ ಮುಖಾಂತರ ಕೇಂದ್ರ ಕಾರ್ಮಿಕ ಕಲ್ಯಾಣ ಮಂತ್ರಿ ಮನಸುಖ ಮಾಂಡವಿಯಾ ಅವರಿಗೆ ಮನವಿ ಪತ್ರ ಸಲ್ಲಿಸಿದರು.

## ಮಾನಸಿಕ ರೋಗಿಯಂತೆ ವರ್ತಿಸುತ್ತಿರುವ ಶಾಸಕ ಯತ್ನಾಳ: ಸುಂಬಡ

■ ಉದಯರಶ್ಮಿ ದಿನಪತ್ರಿಕೆ

ಆಲಮೇಲ: ಬಾಗಲಕೋಟೆ ಜಿಲ್ಲೆ ಮುಧೋಳದಲ್ಲಿ ನಡೆದ ಗಣೇಶ ವಿಸರ್ಜನೆ ಕಾರ್ಯಕ್ರಮದಲ್ಲಿ ವಿಜಯಪುರ ನಗರ ಶಾಸಕ ಬಸವನಗೌಡ ಪಾಟೀಲ(ಯತ್ನಾಳ) ಭಾಷಣ ಮಾಡುತ್ತಾ ಹಜರತ್ ಟಿಪ್ಪು ಸುಲ್ತಾನ್ ಅವರ ಬಗ್ಗೆ ಅಶ್ಲೀಲ ಪದ ಬಳಕೆ ಮಾಡಿದ್ದನ್ನು ವಿರೋಧಿಸಿ ಪ್ರತಿಭಟಿಸಿದ ಟಿಪ್ಪು ಸುಲ್ತಾನ ಯೂಥ್ ಕಮಿಟಿ ಮತ್ತು ಮುಸ್ಲಿಂ ಸಮಾಜದ ಮುಖಂಡರು ಅವರ ಮೇಲೆ ಸೂಕ್ತ ಕಾನೂನು ಕ್ರಮ ತೆಗೆದುಕೊಳ್ಳಬೇಕು ಎಂದು ಆಗ್ರಹಿಸಿ ತಹಶೀಲ್ದಾರ ಮೂಲಕ ಗೃಹ ಸಚಿವರಿಗೆ ಮನವಿ ಸಲ್ಲಿಸಿದರು.

ಆಲಮೇಲ ಪ.ಪಂ ಅಧ್ಯಕ್ಷ ಮತ್ತು ಕಾಂಗ್ರೇಸ ಮುಖಂಡ ಸಾಧೀಕ ಸುಂಬಡ ಮಾತನಾಡಿ, ವಿಜಯಪೂರ ನಗರ ಶಾಸಕ ಬಸವನಗೌಡ ಪಾಟೀಲ(ಯತ್ನಾಳ) 2012ರಲ್ಲಿ ಆಲಮೇಲದಲ್ಲಿ ನಡೆದ ಟಿಪ್ಪು ಸುಲ್ತಾನ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಅತಿಥಿಯಾಗಿ ಭಾಗವಹಿಸಿದರು ಆ ಸಂದರ್ಭದಲ್ಲಿ ಟಿಪ್ಪು ಪ್ರೇಮಿಯಾಗಿದ್ದರು, ಈಗ ಟಿಪ್ಪು ಸುಲ್ತಾನ ಅವರ ಬಗ್ಗೆ ಹಗುರವಾಗಿ ಮಾತನಾಡಿದ್ದಾರೆ. ಭಾರತ ಹಲವಾರು ಜಾತಿ ಧರ್ಮಗಳಿಂದ ಕೂಡಿದ ದೇಶವಾಗಿದೆ. ನೀವು ಜಿಲ್ಲೆಯ ಹಿರಿಯ ರಾಜಕಾರಣಿಯಾಗಿದ್ದೀರಿ, ನಿಮ್ಮ ಮಾತಿನಲ್ಲಿ ನಾಲಿಗೆ ಮತ್ತು ಮೆದುಳಿಗೆ ಸಂಪರ್ಕವಿರಲಿ. ಮಾನಸಿಕ ರೋಗಿಯಂತೆ ವರ್ತಿಸಿ ಸಮಾಜದ ಸ್ವಾಸ್ಥ್ಯ ಹಾಳು ಮಾಡಬೇಡಿ ಎಂದು ಆಕ್ರೋಶ ವ್ಯಕ್ತಪಡಿಸಿದರು.



ಎಸ್.ಡಿ.ಪಿ.ಐ ಮುಖಂಡ ಅಲಿ ಲಾಲಬಂದ ಮಾತನಾಡಿ, ಶಾಸಕ ಪ್ರಚೋದನಕಾರಿಯಾಗಿ ಮಾತನಾಡುತ್ತಾ ದೇಶದ ಶಾಂತಿಗೆ ಭಂಗ ತರುತ್ತಿದ್ದಾರೆ. ಶೀಘ್ರದಲ್ಲಿ ಇವರ ಮೇಲೆ ಸೂಕ್ತ ಕಾನೂನು ಕ್ರಮ ಜರುಗಿಸಬೇಕು ಎಂದರು.

ಈ ಸಂದರ್ಭದಲ್ಲಿ ಸೈಫನ ಜಮಾದಾರ, ಸೈಫನ ಮುಲ್ಲಾ, ಜಹಾಗೀರ ಅಪಘಾನ, ವಹಾಬ್ ಸುಂಬಡ, ಬಾಬು ಕೊತ್ತಂಬರಿ, ಮಕ್ಬೂಲ್ ಚೌಧರಿ, ಜಬ್ಬಾರ ಸುಂಬಡ, ಅಬ್ಬಾಸಲಿ ಕಮಲಾಪೂರ, ಮುರ್ತುಜ್ ಮರ್ತೂರ, ಸಾಧೀಕ ಗೌಂಡಿ, ವಸೀಮ್ ಮಳ್ಳಿ, ಯೂನುಸ ಚೌಧರಿ ಸೇರಿದಂತೆ ಅನೇಕರಿದ್ದರು.

" ಮುಂಬರುವ ದಿನಗಳಲ್ಲಿ ಜಿಲ್ಲೆಯ ಮುಸ್ಲಿಂ ಪರ ಮತ್ತು ಕನ್ನಡ ಪರ ಸಂಘಟನೆಯವರು ಸೇರಿ ಆಲಮೇಲ ಪಟ್ಟಣದಿಂದ ರ್ಯಾಲಿ ಮೂಲಕ ವಿಜಯಪೂರ ನಗರ ಶಾಸಕ ಬಸವನಗೌಡ ಪಾಟೀಲ ಅವರ ಕಚೇರಿಗೆ ಹೋಗಿ ಟಿಪ್ಪು ಸುಲ್ತಾನ ಅವರ ಭಾವಚಿತ್ರವನ್ನು ಕಾಣಿಕೆಯಾಗಿ ನೀಡುತ್ತೇವೆ."

■ **ಸಾಧೀಕ ಸುಂಬಡ**
ಕಾಂಗ್ರೇಸ್ ಮುಖಂಡ, ಆಲಮೇಲ

## ಅಕ್ರಮ ನಳಗಳನ್ನು ಸಕ್ರಮಗೊಳಿಸಿದರೆ ಪುರಸಭೆಗೆ ಆದಾಯ: ಬಿರಾದಾರ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಪಟ್ಟಣದಲ್ಲಿರುವ ಅಕ್ರಮ ನಳಗಳನ್ನು ಸಕ್ರಮಗೊಳಿಸಿದರೆ ಪುರಸಭೆಗೆ ಆದಾಯ ಹೆಚ್ಚಿಸಲು ಸಾಧ್ಯವಾಗುತ್ತದೆ ಎಂದು ಅಧ್ಯಕ್ಷ ಶಾಂತವೀರ ಬಿರಾದಾರ ಅಭಿಮತ ವ್ಯಕ್ತಪಡಿಸಿದರು.

ಪಟ್ಟಣದ ಪುರಸಭೆಯ ಸಭಾ ಭವನದಲ್ಲಿ ಜರುಗಿದ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಹಲವು ವಿಷಯಗಳನ್ನು ಚರ್ಚಿಸಿ ಮಾತನಾಡಿದ ಅವರು, ಅಕ್ರಮವಾಗಿ ನಳ ಸಂಪರ್ಕ ಪಡೆದ ಮನೆಯ ಮಾಲಿಕರಿಗೆ ಸಕ್ರಮಗೊಳಿಸಿಕೊಳ್ಳಲು ಕಾಲಾವಕಾಶ ಅಥವಾ ನೋಟಿನ್ ನೀಡಿ ಸಕ್ರಮಗೊಳಿಸಲು ತಿಳಿಸಬೇಕು ಎಂಬುದಕ್ಕೆ ಸರ್ವ ಸದಸ್ಯರು ಒಪ್ಪಿಗೆ ಸೂಚಿಸಿದರು.

ಬಳಿಕ ಮುಖ್ಯಾಧಿಕಾರಿ ಸುರೇಶ ನಾಯಕ ಮಾತನಾಡಿ, ಪಟ್ಟಣದಲ್ಲಿ ಒಟ್ಟು 10 ಸಾವಿರಕ್ಕೂ ಅಧಿಕ ಮನೆಗಳಿವೆ. ಆದರೆ ಅದರಲ್ಲಿ ಕೇವಲ 2ಸಾವಿರ ಮನೆಗಳು ಮಾತ್ರ ಅಧಿಕೃತ ನಳಗಳ ಜೋಡಣೆಯಿದ್ದು, ಇನ್ನೂಳಿದ ಮನೆಗಳಿಗೆ ಅಕ್ರಮ ನಳಗಳ ಜೋಡಣೆ ಇದೆ ಅವುಗಳನ್ನು ಸಕ್ರಮಗೊಳಿಸುವುದು ಸೂಕ್ತ ಎಂದು ಉಲ್ಲೇಖ ಮಂಡಿಸಿದರು.

ಪುರಸಭೆಯಲ್ಲಿ ಚುನಾಯಿತರಾದ ಸದಸ್ಯರಿಗೆ ಗೌರವ ಇಲ್ಲದಂತಾಗಿದೆ. ನಮ್ಮ ವಾರ್ಡಿನ ಸಮಸ್ಯೆಗಳನ್ನು ಪುರಸಭೆ ಮುಖ್ಯಾಧಿಕಾರಿಗಳಿಗೆ ಕರೆ ಮಾಡಿ ತಿಳಿಸಿದರೂ ಯಾವುದೇ ಕ್ರಮ ಜರುಗಿಸಲ್ಲ ಎಂದು ಸದಸ್ಯೆ ಪ್ರತಿಭಾ ಕಲ್ಲೂರ ಆರೋಪಿಸಿದರು.



ಗುಂಟಾ ಪ್ಲಾಟ್‌ಗಳಿಗೂ ನೀರಿನ ಸೌಲಭ್ಯ ಪೂರೈಕೆಯಾಗಿದ್ದು ಅವರಿಂದ ಬಿಲ್ಲು ಸಂದಾಯ ಮಾಡಿಕೊಳ್ಳಲು ಅಧಿಕೃತವಾಗಿ ಪಡೆದುಕೊಳ್ಳಲು ಬರುವುದಿಲ್ಲ.

ಅಂತಹುಗಳಿಗೂ ತೆರಿಗೆ ಭರಣಾ ಮಾಡಿಕೊಳ್ಳಲು ಸರಕಾರದ ಆದೇಶವಿದ್ದು, ಅವರಿಗಾಗಿ ಪ್ರತೇಕ ರಜಿಷ್ಟರ ವ್ಯವಸ್ಥೆ ಕಲ್ಪಿಸಿ ಕರ ಭರಣಾ ಮಾಡಿಕೊಳ್ಳಬೇಕು ಎಂದು ಸದಸ್ಯ ಬಸವರಾಜ ಯರನಾಳ, ಸಂದೀಪ ಚೌರ ಸಲಹೆ ನೀಡಿದರು.

ಕಂಪ್ಯೂಟರ ಉತಾರೆ ಕಲ್ಪಿಸಿ ಸಾರ್ವಜನಿಕರಿಗೆ ಉತ್ತಮ ಸೇವೆ ಸಲ್ಲಿಸಬೇಕು ಎಂದು ನಾಲ್ಕು ಜನ ಕಂಪ್ಯೂಟರ ಪರಿಣಿತರನ್ನು ಹೊರಗುತ್ತಿಗೆ ಆದಾರದ ಮೇಲೆ ಸೇರ್ಪಡೆ ಮಾಡಿಕೊಂಡು ಪ್ರತಿಯೊಂದು ಮನೆಯ ದಾಖಲೆಗಳನ್ನು ಕ್ರೂಢೀಕರಣ ಮಾಡುವ ಮೂಲಕ ಉತಾರಿ ನೀಡುವ ವ್ಯವಸ್ಥೆ ಕಲ್ಪಿಸಬೇಕು ಸದಸ್ಯ ಹಣಮಂತ ಸುಣಗಾರ ಹೇಳಿದರು.

ರಿ.ಸ.ನಂ473 ಮತ್ತು 474 ಆಶ್ರಯ ವಸತಿ ಯೋಜನೆಯಡಿ ಮನೆಗಳ ಹಂಚಿಗೆಯಾಗಿದ್ದು, ಸದರಿ ಮನೆಗಳಿಗೆ ಕಲ್ಲು ಹಾಕಿ ಗಡಿ ಗುರುತಿಸಿ ಬಡವರಿಗೆ ಅನುಕೂಲ ಮಾಡುವಂತೆ ಆಶ್ರಯ ಸಮಿತಿ ಸದಸ್ಯ ಸಾಯಬಣ್ಣ ಪುರದಾಳ ತಿಳಿಸಿದರು.

ಪುರಸಭೆವ್ಯಾಪ್ತಿಯಎಲ್ಲಾಎನ್.ಎ.ಲೇಔಟ್‌ಗಳಲ್ಲಿ ಸದರಿ ಲೇಔಟ್ ಮಾಲೀಕರು ಕಡ್ಡಾಯವಾಗಿ ಉದ್ಯಾನವನ ಮತ್ತು ನಾಗರಿಕ ಸೌಲಭ್ಯ ಜಾಗಗಳಿಗೆ ಕಂಪೌಂಡ್ ನಿರ್ಮಿಸಿ ಭದ್ರಪಡಿಸಬೇಕು. ಪಟ್ಟಣದ ಪ್ರಮುಖ ರಸ್ತೆಯಾದ ವಿವೇಕಾನಂದ ವೃತ್ತದಿಂದ ಟಿಪ್ಪುಸುಲ್ತಾನ್ ವೃತ್ತದವರೆಗೆ ಸಂಚಾರದಟ್ಟಣೆಯಿಂದ ಸಾರ್ವಜನಿಕರಿಗೆ ತೊಂದರೆವುಂಟಾಗುತ್ತಿದ್ದು, ಎಕಮುಖ(ಒನ್‌ವೇ) ನಿರ್ಮಿಸುವದು, ಕಚೇರಿಯ ಎಲ್ಲ ಸಿಬ್ಬಂದಿಗಳಿಗೆ ಬಯೋಮೆಟ್ರಿಕ್ ಹಾಜರಾತಿ ಕಡ್ಡಾಯವಾಗಿ ಕಾರ್ಯರೂಪಕ್ಕೆ ತರುವುದು, 15ನೇ ಹಣಕಾಸು ಯೋಜನೆಯಡಿ ನಿರ್ವಹಿಸುತ್ತಿರುವ ಕಾಮಗಾರಿಗಳಿಗೆ ಅನುಮೋದನೆ ನೀಡಿ ಕಾಮಗಾರಿ ಆದೇಶ ನೀಡುವದು.

ಸಿಂದಗಿ ಪುರಸಭೆಯ ಕಾನೂನು ಸಲಹೆಗಾರರು ಪುರಸಭೆಯ ವ್ಯಾಜ್ಯಗಳಿಗೆ ಸಂಬಂಧಿಸಿದಂತೆ ನ್ಯಾಯಾಲಯಕ್ಕೆ ಹಾಜರಾಗುತ್ತಿಲ್ಲ. ಕಾರಣ ಸದರಿ ಕಾನೂನು ಸಲಹೆಗಾರರನ್ನು ಬದಲಾಯಿಸಿ ನೂತನ ಕಾನೂನು ಸಲಹೆಗಾರರನ್ನು ನೇಮಿಸುವದು. ಸಿಂದಗಿ ಪಟ್ಟಣಕ್ಕೆ ಕುಡಿಯುವ ನೀರು ಪೂರೈಸುವ ಬಳಗಾನೂರ ಕೆರೆ, ಯರಗಲ್ ಕೆನಾಲ್ ಮತ್ತು ಸಿಂದಗಿ ಕೆರೆಯ ಪಂಪಗಳನ್ನು ದುರಸ್ಥಿಗೊಳಿಸುವದು ಸೇರಿದಂತೆ 22ವಿಷಯಗಳ ಕುರಿತು ಸಭೆಯಲ್ಲಿ ಚರ್ಚೆಯಾಗಿ ಅನುಮೋದನೆ ಪಡೆದುಕೊಂಡವು.

ಈ ಸಂದರ್ಭದಲ್ಲಿ ಉಪಾಧ್ಯಕ್ಷ ರಾಜಣ್ಣಿ ನಾರಾಯಣಕರ, ಮಾಜಿ ಅಧ್ಯಕ್ಷ ಭಾಷಾಸಾಬ ತಾಂಬೋಳಿ, ಸದಸ್ಯರಾದ ಹಾಸೀಂ ಆಳಂದ, ಶರಣಗೌಡ ಪಾಟೀಲ, ಗೊಲ್ಲಾಳ ಬಂಕಲಗಿ, ಶರಣಗೌಡ ಪಾಟೀಲ, ಶ್ರೀಶೈಲ ಬೀರಗೊಂಡ, ಪಾರ್ವತಿ ದುರ್ಗಿ, ಮಹಾಂತೇಶ ಬಿರಾದಾರು, ಬಸಮ್ಮ ಸಜ್ಜನ, ಮಹಾದೇವಿ ನಾಯ್ಕೋಡಿ, ರಹಿಮ್ ದುದ್ದನಿ, ಸಿದ್ದು ಮಲ್ಲೇದ, ಚನ್ನಪ್ಪ ಗೋಣಿ ಸೇರಿದಂತೆ ಹಾಜರಿದ್ದ ಸದಸ್ಯರು ತಮ್ಮ ವಾರ್ಡಿನ್ ಸಮಸ್ಯೆಗಳನ್ನು ವಿವರಿಸಿದರು.

ಸಿಬ್ಬಂದಿ ಸಿದ್ದು ಅಂಗಡಿ ನಡಾವಳಿ ಪತ್ರವನ್ನು ಓದಿದರು. ಜೆಇ ಎ.ಜೆ.ನಾಟೀಕಾರ, ಸೇರಿದಂತೆ ಎಲ್ಲ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಬೇಲಿಯೇ ಎದ್ದು ಹೊಲ ಮೇಯ್ದಂತೆ ಪುರಸಭೆಗೆ ಆದಾಯ ಹೆಚ್ಚಿಸುವ ಯೋಜನೆ ರೂಪಿಸುತ್ತಿರುವುದು ಸ್ವಾಗತಾರ್ಹ. ಆದರೆ ಬೇಲಿಯೇ ಎದ್ದು ಹೊಲ ಮೇಯ್ದ ಹಾಗೆ ಪುರಸಭೆ ಸದಸ್ಯರೇ ಏಜೆಂಟರ ರೀತಿಯಲ್ಲಿ ಕೆಲಸ ಮಾಡುತ್ತಿರುವುದರಿಂದ ಪುರಸಭೆಗೆ ಬರುತ್ತಿರುವ ಹಣ ಪೋಲಾಗುತ್ತಿದೆ. ಇದಕ್ಕೆ ಕ್ರಮವೇನು? ಅಂತಹವರ ವಿರುದ್ಧ ಎಫ್‌ಐಆರ್ ದಾಖಲಿಸಿ ಕ್ರಮಕೈಗೊಂಡಾಗ ಪೋಲಾಗುತ್ತಿರುವ ಹಣ ತಡೆಗಟ್ಟಲು ಸಾಧ್ಯ. ಬ್ಯಾಂಕ ಸಿಬ್ಬಂದಿ, ಮನೆ ಮಾಲೀಕ ಹಾಗೂ ಸಿಬ್ಬಂದಿ ವಿರುದ್ಧ ಪ್ರಕರಣ ದಾಖಲಿಸಬೇಕು. ಎಂದು ಮಾಜಿ ಅಧ್ಯಕ್ಷ ಡಾ.ಶಾಂತವೀರ ಮನಗೂಳಿ ಪಟ್ಟು ಹಿಡಿದ ಘಟನೆ ಚರ್ಚೆಗೆ ಗ್ರಾಸವಾಯಿತು.

# ಲೂಯಿಸ್ ಫ್ಯಾಶ್ಚರನಂತೆ ಮಕ್ಕಳು ಸಾಧನೆ ಮಾಡಬೇಕು



■ ಉದಯರಶ್ಮಿ ದಿನಪತ್ರಿಕೆ

ಮುದ್ದೇಬಿಹಾಳ: ತಾಲೂಕಿನ ಬಿದರಕುಂದಿ ಗ್ರಾಮದ ಸರ್ಕಾರಿ ಆದರ್ಶ ವಿದ್ಯಾಲಯದಲ್ಲಿ ಶನಿವಾರ ಇಕೋ ಕ್ಲಬ್ ಅಡಿಯಲ್ಲಿ ಗೋ ಗ್ರೀನ್ ಕಾರ್ಯಕ್ರಮ ಹಾಗೂ ಪಶುಪಾಲನೆ ಇಲಾಖೆ ಸಂಯುಕ್ತಾಶ್ರ ಯದಲ್ಲಿ ಅಂತರರಾಷ್ಟ್ರೀಯ ರೇಬಿಸ್ ದಿನಾಚರಣೆ ಅಂಗವಾಗಿ ರೇಬಿಸ್ ಕುರಿತು ಅರಿವು ಮೂಡಿಸುವ ಕಾರ್ಯ ಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ವೇಳೆ ಶಾಲೆಯ ಮುಖ್ಯೋಪಾಧ್ಯಾಯಕ ಅನಿಲಕುಮಾರ ರಾಠೋಡ ಪ್ರಾಸ್ತಾವಿಕ ಮಾತನಾಡಿ, ಲಸಿಕೆ ಕಂಡುಹಿಡಿದು ಅನೇಕ ಜೀವಗಳನ್ನು ಉಳಿಸಿದ ಲೂಯಿಸ್ ಫ್ಯಾಶ್ಚರನಂತೆ ಮಕ್ಕಳು ಸಾಧನೆ ಮಾಡುವಂತೆ ಪ್ರೇರೇಪಿಸಿದರು. ಪಶುಪಾಲನೆ ಇಲಾಖೆಯ ಸಹಾಯಕ ನಿರ್ದೇಶಕ ಶಿವಾನಂದ ಮೇಟಿ, ತಾಲೂಕಿನ ಮುಖ್ಯ ಪಶುವೈದ್ಯಧಿಕಾರಿ ಸುರೇಶ ಭಜಂತ್ರಿ ಪಶುಗಳಿಂದ ಹರಡುವ ರೋಗಗಳು, ಅವುಗಳ ಲಕ್ಷಣಗಳು ಹಾಗೂ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ಮಾಹಿತಿ ನೀಡಿದರು. ರೇಬಿಸ್ ಲಸಿಕೆ ಕಂಡು ಹಿಡಿದಂತಹ ವಿಜ್ಞಾನಿ ಲೂಯಿಸ್ ಫ್ಯಾಶ್ಚರ ಹಾಗೂ ರೇಬಿಸ್ ಕುರಿತು ಬಸವರಾಜ ಸಜ್ಜನ ಮಕ್ಕಳೊಂದಿಗೆ ಸಂವಾದ ನಡೆಸಿದರು. ಗೋಗ್ರೀನ್ ಕಾರ್ಯಕ್ರಮದಲ್ಲಿ ಮಕ್ಕಳಿಂದ 25 ವರ್ಷಗಳಿಗಿಂತ ಹಳೆಯದಾದ ಮರಗಳ ಬೀಜಗಳ ತರಿಸಿ, ಸಾವಯವ ಗೊಬ್ಬರ ಹಾಗೂ ಮಣ್ಣಿನಿಂದ ಬೀಜದ ಉಂಡೆ ತಯಾರಿಸಿ ತಮ್ಮ ನೆರೆಹೊರೆಯಲ್ಲಿ ಅಥವಾ ರಸ್ತೆಗಳ ಪಕ್ಕದಲ್ಲಿ ಹರಡುವ ಪ್ರಕೃತಿಯನ್ನು ಹಸಿರಾಗಿಸುವಂತೆ ಮಾರ್ಗದರ್ಶನ ನೀಡಿದರು. ಕಾರ್ಯಕ್ರಮದಲ್ಲಿ ಎಲ್ಲ ಶಿಕ್ಷಕರು ವಿದ್ಯಾರ್ಥಿಗಳು ಭಾಗಿಯಾಗಿದ್ದರು.

# ಪರಿಸರ ಸ್ವಚ್ಛವಾಗಿಟ್ಟುಕೊಳ್ಳುವುದು ನಮ್ಮೆಲ್ಲರ ಜವಾಬ್ದಾರಿ :ನ್ಯಾ.ಕಟ್ಟಿಮನಿ

■ ಉದಯರಶ್ಮಿ ದಿನಪತ್ರಿಕೆ



ಮುದ್ದೇಬಿಹಾಳ: ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವದು ನಮ್ಮೆಲ್ಲರ ಜವಾಬ್ದಾರಿ. ಆ ಜವಾಬ್ದಾರಿಯನ್ನು ಪ್ರತಿಯೊಬ್ಬರೂ ಬಾಚೂ ತಪ್ಪದೇ ಪಾಲಿಸಿದಲ್ಲಿ ಸುಂದರ ಹಾಗೂ ಆರೋಗ್ಯಯುತ ಸಮಾಜ ನಿರ್ಮಿಸಲು ಸಾಧ್ಯ ಎಂದು ಇಲ್ಲಿನ ಹಿರಿಯ ಸಿವಿಲ್ ನ್ಯಾಯಾಧೀಶ ರವೀಂದ್ರಕುಮಾರ ಕಟ್ಟಿಮನಿ ಹೇಳಿದರು.

ಪಟ್ಟಣದ ನ್ಯಾಯಾಲಯದ ಆವರಣದಲ್ಲಿ ಕಾನೂನು ಸೇವಾ ಸಮಿತಿ, ನ್ಯಾಯವಾದಿಗಳ ಸಂಘ, ಪುರಸಭೆ ಕಾರ್ಯಾಲಯ ಇವುಗಳ ಸಂಯುಕ್ತ ಆಶ್ರಯದಲ್ಲಿ ಗಾಂಧಿ ಜಯಂತಿ ಪ್ರಯುಕ್ತ ಹಮ್ಮಿಕೊಳ್ಳಲಾಗಿದ್ದ ಸ್ವಚ್ಛತಾ ಕಾರ್ಯಕ್ರಮಕ್ಕೆ ಕಸ ಗುಡಿಸುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಗಾಂಧೀಜಿಯವರ ಸ್ವಚ್ಛ ಭಾರತ ಕಸನಿಗೆ ನಾವೆಲ್ಲರೂ ಕೈಜೋಡಿಸಬೇಕು. ಎಲ್ಲಂದರಲ್ಲಿ ಕಸ ಬಿಸಾಡುವದು, ಪರಿಸರವನ್ನು ಮಲಿನಮಾಡುವದು ಮಾಡಬಾರದು. ನಮ್ಮ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಂಡಲ್ಲಿ ಯಾವ ರೋಗಗಳೂ ನಮ್ಮ ಬಳಿ ಸುಳಿಯಲಾರವು. ಶಾಲಾ–ಕಾಲೇಜುಗಳು, ಸರ್ಕಾರಿ ಕಚೇರಿಗಳು, ಸಾರ್ವಜನಿಕ ಪ್ರದೇಶಗಳಲ್ಲಿ ಮೇಲಿಂದ ಮೇಲೆ ಸ್ವಚ್ಛತಾ ಕಾರ್ಯಕ್ರಮವನ್ನು ಹಮ್ಮಿಕೊಂಡು ಸ್ವಚ್ಚತೆಗೆ ಹೆಚ್ಚಿನ ಆದ್ಯತೆ ನೀಡುವಂತಾಗಬೇಕು ಎಂದರು.

ಪುರಸಭೆ ಮುಖ್ಯಾಧಿಕಾರಿ ಮಲ್ಲನಗೌಡ ಬಿರಾದಾರ ಮಾತನಾಡಿ, ಪಟ್ಟಣದಲ್ಲಿ ಹಲವು ಅಂಗಡಿಯವರು ತಮ್ಮಲ್ಲಿ ಶೇಖರಣೆಯಾಗುವ ತ್ಯಾಜ್ಯವನ್ನು ಕಸದ ವಿಲೇವಾರಿ ವಾಹನಕ್ಕೆ ಹಾಕದೇ ಎಲ್ಲಂದರಲ್ಲಿ ಎಸೆಯುವ ಬಗ್ಗೆ ದೂರುಗಳು ಕೇಳಿಬರುತ್ತಿವೆ. ಕೂಡಲೇ ಸುಧಾರಿಸಿಕೊಂಡು ದಿನನಿತ್ಯದ ತಾಜ್ಯವನ್ನು ಕಸದ ವಾಹನಕ್ಕೆ ಹಾಕುವ ಮೂಲಕ ಪರಿಸರ ಸ್ವಚ್ಛತೆಗೆ ಸಹಕರಿಸಬೇಕು ಎಂದರು.

ನ್ಯಾಯವಾದಿಗಳ ಸಂಘದ ಅಧ್ಯಕ್ಷ ಶಶಿಕಾಂತ ಮಾಲಗತ್ತಿ, ಹಿರಿಯ ನ್ಯಾಯವಾದಿ ಎಂ.ಎಚ್.ಹಾಲಣ್ಣವರ ಮಾತನಾಡಿ, ಸ್ವಚ್ಛತೆ ಇರುವ ಕಡೆಗೆ ದೇವರು ನೆಲೆಸುತ್ತಾನೆ. ನಾವೆಲ್ಲ ಮೊದಲು ಸ್ವಚ್ಛತೆಯನ್ನು ಕಾಪಾಡಿಕೊಳ್ಳಬೇಕು. ಕಲುಷಿತ ವಾತಾವರಣದಿಂದ ಸದೃಢ ಸಾಮಾಜ ನಿರ್ಮಿಸಲು ಸಾಧ್ಯವಿಲ್ಲ. ನಾವು ವಾಸಿಸುವ ಮನೆಗಳ ಸುತ್ತಮುತ್ತ, ಕೆಲಸ ಮಾಡುವ ಕಚೇರಿ, ಅಂಗಡಿ ಇತ್ಯಾದಿ ಸ್ಥಳವನ್ನು ಸ್ವಯಂಪ್ರೇರಿತರಾಗಿ ಸ್ವಚ್ಛಗೊಳಿಸುವಂತಾಗಬೇಕು ಎಂದರು.

ಎರಡು ಗಂಟೆಗೂ ಅಧಿಕ ಕಾಲ ನ್ಯಾಯಾಲಯದ ಆವರಣವನ್ನು ಸ್ವಚ್ಛಗೊಳಿಸಲಾಯಿತು.

ಈ ಸ್ವಚ್ಛತಾ ಕಾರ್ಯಕ್ರಮದಲ್ಲಿ ನ್ಯಾಯವಾದಿಗಳಾದ ಎನ್.ಜಿ.ಕುಲಕರ್ಣಿ, ಎಂ.ಆರ್.ಪಾಟೀಲ, ಬಿ.ಪಿ.ಮ್ಯಾಗೇರಿ, ನ್ಯಾಯಾಲಯದ ಶಿರಸ್ತೇದಾರರುಗಳಾದ ಎಸ್.ಎಸ್.ಚಕ್ರಮನಿ, ಎಸ್. ಎಸ್.ಬಳಗಾನೂರ, ಸಿಬ್ಬಂದಿಗಳಾದ ಅರವಿಂದ ಕುಂಬಾರ, ಜ್ಯೋತಿ ಹಕಾರಿ, ಲಕ್ಕಮ್ಮ ಗುರಿಕಾರ, ಶರಣಬಸಪ್ಪ ಪೂಜಾರ, ಪದ್ಮಾವತಿ ಗಾಯಕವಾಡ, ಅಶೋಕ ಕುಂಬಾರ, ಬಂದೇನವಾಜ ಖಾಜಿ, ರಮೇಶ ಲಮಾಣಿ, ರಾಜಶೇಖರ ಬಿರಾದಾರ, ಅಬ್ದುಲರಹೆಮಾನ ಮುಜಾವರ, ಅನಸೂಯಾ ಪತ್ತಾರ, ಮಂಜುಳಾ ಗಾಡದ, ಶ್ರೀಕಾಂತ ಸಂಕೀನ, ಆರ್.ಪಿ.ಜಾನಮಟ್ಟಿ, ಜೆ.ಎಸ್.ಹೆಬ್ಬಾಳ, ಬಸವರಾಜ ಹುನಶ್ಯಾಳ, ಎನ್.ಬಿ.ಮದಿಹಳ್ಳಿ, ಇಸಾಕ ಒಂಟಿ, ಮಹಾಂತೇಶ ಹಚರೆಡ್ಡಿ ಸೇರಿದಂತೆ ನ್ಯಾಯಾಲಯದ ಎಲ್ಲ ಸಿಬ್ಬಂದಿ, ಪುರಸಭೆಯ ಪೌರಕಾರ್ಮಿಕರು ಹಾಜರಿದ್ದರು.

# ಯಾವುದೇ ಪ್ರಾಣಿಯ ಕಡಿತವನ್ನು ನಿರ್ಲಕ್ಷಿಸದೇ ಲಸಿಕೆ ಹಾಕಿಸಿಕೊಳ್ಳಿ




■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ದೇಶದಲ್ಲಿ ಪ್ರತಿ ವರ್ಷ 20ಸಾವಿರಕ್ಕೂ ಹೆಚ್ಚು ಜನ ಈ ರೇಬೀಸ್ ಮಹಾಮಾರಿಗೆ ಬಲಿಯಾಗುತ್ತಿದ್ದಾರೆ. ನಾಯಿ ಸೇರಿದಂತೆ ಯಾವುದೇ ಪ್ರಾಣಿಯ ಕಡಿತವನ್ನು ನಿರ್ಲಕ್ಷಿಸದೇ ಲಸಿಕೆ ಹಾಕಿಸಿಕೊಳ್ಳಬೇಕು ಎಂದು ತಾಲೂಕಾ ಪಶುವೈದ್ಯಾಧಿಕಾರಿ ಡಾ.ಮಾರುತಿ ತಡಲಗಿ ಹೇಳಿದರು.

ಪಟ್ಟಣದ ಆರ್.ಡಿ.ಪಾಟೀಲ ಪದವಿ ಪೂರ್ವ ಕಾಲೇಜಿನಲ್ಲಿ ಹಮ್ಮಿಕೊಂಡ ತಾಲೂಕಾ ಆರೋಗ್ಯ ಇಲಾಖೆ, ಪಶುಪಾಲನಾ, ಪಶು ವೈದ್ಯಕೀಯ ಸೇವಾ ಇಲಾಖೆ ಹಾಗೂ ಆರ್.ಡಿ.ಪಾಟೀಲ ಪದವಿ ಪೂರ್ವ ಕಾಲೇಜು ಇವುಗಳ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ರೇಬೀಸ್ ನಿಯಂತ್ರಣ ಕಾರ್ಯಕ್ರಮ ಮತ್ತು ವಿಶ್ವ ರೇಬೀಸ್ ದಿನಾಚರಣೆಯನ್ನುದ್ದೇಶಿಸಿ ಅವರು ಮಾತನಾಡಿದ ಅವರು, ರೇಬೀಸ್ ಅನ್ನುವುದು ಸಸ್ತನಿಗಳಲ್ಲಿ ವೈರಾಣುವಿನಿಂದ ಹರಡುವ ಕಾಯಿಲೆ ಶ್ವಾನಗಳಿಂದ ಕಡಿತ ಮತ್ತು ಲಾಲಾರಸದ ಸಂಪರ್ಕದಿಂದ ಮನುಷ್ಯನಿಗೆ ಹರಡುತ್ತದೆ. ನೇರವಾಗಿ ನರಮಂಡಲದ ಮೇಲೆ ಪರಿಣಾಮ ಬೀರುತ್ತದೆ. ಆದ್ದರಿಂದ ಮಿದುಳಿಗೆ ಘಾಸಿಯಾಗಿ ಸಾವು ಸಂಭವಿಸುತ್ತವೆ. ಆರಂಭದಲ್ಲಿಯೇ ಚಿಕಿತ್ಸೆ ಪಡೆದರೆ ಇದು ಗುಣಪಡಿಸಬಹುದಾದ ಕಾಯಿಲೆ ಎನ್ನುವುದು ತಜ್ಞರ ಅಭಿಮತವಾಗಿದೆ. ಶ್ವಾನಗಳಿಂದ ಮನುಷ್ಯನಿಗೆ ರೇಬೀಸ್ ಹರಡುವುದನ್ನು 2030ರ ಒಳಗೆ ತಡೆಯುವ ಗುರಿಯನ್ನು ಇರಿಸಿಕೊಳ್ಳಲಾಗಿದೆ. ಜಗತ್ತಿನಲ್ಲಿಯೇ ಭಾರತದಲ್ಲಿ ಈ ರೋಗದ ಪ್ರಮಾಣ ಹೆಚ್ಚಾಗಿದೆ ಎಂದರು.

ನಾಯಿಕಡಿತ, ರೇಬೀಸ್ ಲಕ್ಷಣಗಳು ಮತ್ತು ರೇಬೀಸ್‌ನ ನಂತರದ ರೊಗ ನಿರೋಧಕ ನಿರ್ವಹಣೆ ಕುರಿತು ಪ್ರೋಜೆಕ್ಟರ್ ಮೂಲಕ ಡಾ.ಮಾರುತಿ ತಡಲಗಿ ಅವರು ಸವಿಸ್ತಾರವಾಗಿ ವಿದ್ಯಾರ್ಥಿಗಳಿಗೆ ವಿವರಿಸಿದರು. ತಾಲೂಕಾ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಡಿ.ಕುಲಕರ್ಣಿ ಮಾತನಾಡಿ, ರೇಬೀಸ್‌ನಿಂದ ಮಾನವ ಸಾವುಗಳನ್ನು ನಿರ್ಮೂಲನೆ ಮಾಡುವದು ಸಾಧಿಸಬಹುದಾದ ಗುರಿಯಾಗಿದೆ. ರೇಬೀಸ್ ಯಾವುದೆ ನಿರ್ಧಿಷ್ಟ ಚಿಕಿತ್ಸೆ ಇಲ್ಲದರಿರುವುದರಿಂದ ಅದನ್ನು ತಡೆಯಲು ಎಲ್ಲ ಪ್ರಯತ್ನಗಳು ಅಗತ್ಯ. ಸಾಕು ನಾಯಿ ಮತ್ತು ಬೆಕ್ಕುಗಳಿಗೆ ನಿಯಮಿತವಾಗಿ ರೇಬೀಸ್ ನಿರೋಧಕ ಚುಚ್ಚುಮದ್ದನ್ನು ಕೊಡಿಸಬೇಕು ಅವುಗಳ ಆರೋಗ್ಯದ ಬಗ್ಗೆ ಪಶುವೈದ್ಯರಿಂದ ಸೂಕ್ತ ಸಲಹೆಗಳನ್ನು ಪಡೆದುಕೊಳ್ಳಬೇಕು ಎಂದರು. ಈ ಕಾರ್ಯಕ್ರಮದಲ್ಲಿ ಅಧ್ಯಕ್ಷತೆಯನ್ನು ಪ್ರಾಚಾರ್ಯ ಭೀಮನಗೌಡ ಸಿಂಗನಳ್ಳಿ, ಉಪಪ್ರಾಚಾರ್ಯ ಪಿ.ವ್ಹಿ. ಮಹಲಿನಮಠ, ತಾಲೂಕಾ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಪಿ.ವೈ.ಚೌಡಕಿ, ಆರೋಗ್ಯ ನಿರೀಕ್ಷಣಾಧಿಕಾರಿ ವಿರೇಂದ್ರ ಪವಾಡಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಎನ್.ಬಿ.ಪೂಜಾರಿ, ಎಸ್.ಎಸ್.ತಾಳಿಕೋಟಿ, ಡಾ. ಎಸ್.ಸಿ.ಜೋಗೂರ, ಶಿವಶರಣ ಬೂದಿಹಾಳ, ವ್ಹಿ.ಪಿ.ನಂದಿಕೋಲ, ಸಂಗಮೇಶ ಚಾವರ್, ಎನ್. ಎಂ.ಶೆಳ್ಳಗಿ, ರೋಹಿತ್ ಸುಲ್ಪಿ, ಚಂದ್ರು ಬಬಲೇಶ್ವರ್, ಎಸ್.ಜಿ.ಮಾರ್ಸನಳ್ಳಿ, ಎಸ್. ಎಚ್.ಜಾಧವ, ಬಿ.ಬಿ.ಜಮಾದಾರ, ಎಸ್.ಎಸ್.ಹೂಗಾರ, ರಾಹುಲ ನಾರಾಯಣಕರ್, ರಾಹುಲ ಕುನ್ನಾಳ, ಸುನೀಲ ಪಾಟೀಲ, ಪ್ರಸನ್ ಜೋಗೂರ, ಗವಿಸಿದ್ದಪ್ಪ ಆನೆಗುಂದಿ, ರೂಪಾ ಆಲಮೇಲ ಸೇರಿದಂತೆ ಆರೋಗ್ಯ ಇಲಾಖೆಯ ಆಶಾ ಕಾರ್ಯಕರ್ತೆಯರು, ವಿದ್ಯಾರ್ಥಿಗಳು ಇನ್ನಿತರರು ಇದ್ದರು.

# ನೌಕರಿಗಾಗಿ ಓದದೇ ಬದುಕಿನ ವಿಕಾಸಕ್ಕಾಗಿ ಓದಿ :ಡಾ.ಪಾಟೀಲ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಶಿಕ್ಷಣ ಎನ್ನುವುದು ನಿರಂತರವಾಗಿರುವ ಪ್ರಕ್ರಿಯೆ. ಒಂದು ಹಂತದವರೆಗಿನ ಶಿಕ್ಷಣ ಮುಗಿಸಿದರೆ ಸಾಲದು. ಪದವಿ ಎನ್ನುವದು ಒಂದು ಹಂತ ಅಷ್ಟೆ, ಆದ್ದರಿಂದ ಎಲ್ಲರೂ ಶಿಕ್ಷಣ ಮುಂದುವರಿಸಿ ಎಂದು ಡಾ ಆರ್. ಎಮ್.ಪಾಟೀಲ ಹೇಳಿದರು. ಪಟ್ಟಣದ ಪಿ.ಇ.ಎಸ್ ಸಂಸ್ಥೆಯ ಅಂಗಸಂಸ್ಥೆಯಾದ ಶ್ರೀಮತಿ ಪ್ರೇಮಾ ಭೀ. ಕರ್ಜಗಿ ಪದವಿ ಮಹಾವಿದ್ಯಾಲಯ ಹಾಗೂ ಲಯನ್ಸ್ ಕ್ಲಬ್ ಸಿಂದಗಿ ಇವರ ಆಶ್ರಯದಲ್ಲಿ ಹಮ್ಮಿಕೊಂಡ ಪದವಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಹಾಗೂ ಶಿಕ್ಷಕರ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸಾಧನೆ ಮಾಡಲು ಕೇವಲ ಓದು ಬರಹ ಅಷ್ಟೇ ಅಲ್ಲ. ಅದರ ಜೊತೆ ಕೌಶಲ್ಯವನ್ನೂ ಅಳವಡಿಸಿಕೊಳ್ಳಬೇಕು. ಕೇವಲ ನೌಕರಿಗಾಗಿ ಓದದೇ ಬದುಕಿನ ವಿಕಾಸಕ್ಕಾಗಿ ಓದಬೇಕು ಎಂದರು.

ಇದೇ ಸಂದರ್ಭದಲ್ಲಿ ಆಲಮೇಲ ನಿರ್ಮಲಾಲಯ ಪ್ರೌಢಶಾಲೆ ಮುಖ್ಯ ಗುರುಮಾತೆ ಸಿಸ್ಟರ್ ಐರೀನ್, ಗೀತಾ ಹಿಪ್ಪರಗಿ ಎಸ್.ಆಯ್.ಅಂಕಲಗಿ ಶಿಕ್ಷಕರನ್ನು ಹಾಗೂ ರಾಷ್ಟ್ರಮಟ್ಟದ ಬೆಸ್ಟ್ ಅಗ್ರೀ ಪ್ರೇನರ್ ಪ್ರಶಸ್ತಿ ಪುರಸ್ಕೃತ ಮನೋಜ ವಾರದ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಸಮಾರಂಭದ ಸಮ್ಮುಖವನ್ನು ಸಂಸ್ಥೆಯ ಗೌರವ ಕಾರ್ಯದರ್ಶಿ ಬಿ.ಪಿ.ಕರ್ಜಗಿ, ಅಧ್ಯಕ್ಷತೆಯನ್ನು ತಾಲೂಕಾ ಲಾಯನ್ಸ್ ಕ್ಲಬ್ ಅಧ್ಯಕ್ಷ ಮಾಧು ಲೋಣಿ ವಹಿಸಿದ್ದರು. ಎಂ.ಜೆ.ಎಫ್ ಲಾಯನ್ ಕೆ.ಎಚ್. ಸೋಮಾಪೂರ, ಆಡಳಿತಾಧಿಕಾರಿ ಆಯ್.ಬಿ.ಬಿರಾದಾರ, ಪದವಿ ಮಹಾವಿದ್ಯಾಲಯದ ಪ್ರಾಚಾರ್ಯ ಜಿ. ಎಸ್.ಕಡಣಿ, ಆರ್.ಬಿ.ಗೋಡಕರ, ಎಸ್. ವಾಯ್.ಬೀಳಗಿ, ಪಿ.ಎಮ್.ಮಡಿವಾಳರ ಸೇರಿದಂತೆ ಕಾಲೇಜಿನ ಬೋಧಕ ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಅಕ್ಷತಾ ಬಂದಪಟ್ಟಿ ನಿರೂಪಿಸಿದರು. ಭಾಗ್ಯಶ್ರೀ ಬಬಲೇಶ್ವರ ಸ್ವಾಗತಿಸಿದರು. ನಂದಿನಿ ಹಿರೇಮಠ ವಂದಿಸಿದರು.

# ಶಿಕ್ಷಣವಂತರಾದರೆ ದೌರ್ಜನ್ಯ ತಡೆಯಲು ಸಾಧ್ಯ :ರಾಠೋಡ

■ ಉದಯರಶ್ಮಿ ದಿನಪತ್ರಿಕೆ



ಇಂಡಿ: ಅನುಸೂಚಿತ ಜಾತಿ, ಪಂಗಡದ ಜನರು ಶಿಕ್ಷಣವಂತರಾದರೆ ಸಮಾಜದಲ್ಲಿ ನಡೆಯುವ ದೌರ್ಜನ್ಯ ತಡೆಯಲು ಸಾಧ್ಯ. ಶಿಕ್ಷಣವಂತರಾದರೆ ಕಾನೂನು ಅರಿವು ಬಂದು ದೌರ್ಜನ್ಯ ಕಡಿಮೆಯಾಗುತ್ತವೆ ಎಂದು ಪುರಸಭೆ ಅಧ್ಯಕ್ಷ ಲಿಂಬಾಜಿ ರಾಠೋಡ ಹೇಳಿದರು.


ಪಟ್ಟಣದ ಡಿ.ವಾಯ್.ಎಸ್.ಪಿ ಕಚೇರಿ ಸಭಾಭವನದಲ್ಲಿ ನಡೆದ ಉಪವಿಭಾಗೀಯ ಮಟ್ಟದ ಎಸ್ ಸಿ, ಎಸ್ ಟಿ ದೌರ್ಜನ್ಯ ನಿಯಂತ್ರಣ ಸಮಿತಿ ಸಭೆಯಲ್ಲಿ ಮಾತನಾಡಿದರು. ಶಿಕ್ಷಣವಂತರಾದರೆ ಮದ್ಯಪಾನ, ಮಟಕಾ,ಜೂಜಾಟದಂತಹ ವ್ಯಸನಗಳು ಕಡಿಮೆಯಾಗಿ ಒಳ್ಳೆಯ ಸಮಾಜ ನಿರ್ಮಿಸಲು ಸಾಧ್ಯ ಎಂದರು.

ಡಿಎಸ್ ಎಸ್ ತಾಲೂಕಾ ಸಂಚಾಲಕ ರಮೇಶ ನಿಂಬಾಳಕರ ಮಾತನಾಡಿ, ಪಜಾ ಪಪಂ ಜನರಿಂದ ದೌರ್ಜನ್ಯ ಕೇಸ್ ಪಡೆದುಕೊಂಡು ಆರೋಪಿಗಳನ್ನು ಬಂದಿಸುತ್ತಿಲ್ಲ. ಇದರಿಂದ ಆರೋಪಿಗಳು ರಾಜಾ ರೋಷವಾಗಿ ಹೊರಗಡೆ ಅಡ್ಡಾಡುತ್ತಾರೆ ಹೀಗಾಗದಂತೆ ನೋಡಿಕೊಂಡು ದೌರ್ಜನ್ಯಕ್ಕೆ ಒಳಗಾದವರಿಗೆ ನ್ಯಾಯ ಒದಗಿಸಬೇಕೆಂದು ಎಂದರು. ಡಿ.ವಾಯ್.ಎಸ್.ಪಿ ಜಗದೀಶ ಮಾತನಾಡಿ ದೌರ್ಜನ್ಯದಲ್ಲಿ ನೊಂದ ಸಂತ್ರಸ್ತರಿಗೆ ತಕ್ಷಣ ಇಲಾಖೆಯಿಂದ ಪರಿಹಾರ ಧನ ನೀಡಲು ಕೇಳಿಕೊಂಡರು. ಡಿ.ಎಸ್.ಎಸ್. ಜಿಲ್ಲಾ ಸಂಚಾಲಕ ವಿನಾಯಕ ಗುಣಸಾಗರ,ತಾಲೂಕಾ ಅಧ್ಯಕ್ಷ ಶಿವಾನಂದ ಮೂರಮನ, ಸಿಂದಗಿ ತಾಲೂಕಾ ದಲಿತ ಮುಖಂಡ ಚಂದ್ರಕಾಂತ ಸಿಂಗೆ ಮಾತನಾಡಿ, ಕಚೇರಿಗೆ ಆಗಮಿಸುವ ಸಾರ್ವಜನಿಕರೊಂದಿಗೆ ಅಧಿಕಾರಿ ಹಾಗೂ ಸಿಬ್ಬಂದಿವರ್ಗ ಸೌಜನ್ಯದಿಂದ ವರ್ತಿಸಬೇಕು. ಪರಿಶಿಷ್ಠ ಜಾತಿ, ಪಂಗಡದವರು ವಿವಿಧ ಯೋಜನೆಗಳ ಸಾಲ ಸೌಲಭ್ಯ ಕೋರಿ ಸಲ್ಲಿಸಿರುವ ಅರ್ಜಿಗಳನ್ನು ಪರಿಗಣಿಸಿ ಶೀಘ್ರ ಸೌಲಭ್ಯ ಒದಗಿಸಬೇಕು ಎಂದು ಸೂಚಿಸಿದರು. ಜಿಲ್ಲಾ ಪೋಲಿಸ ವರಿಷ್ಠಾಧಿಕಾರಿ ರಿಷಿಕೇಶ ಸೋನಾವನೆ, ಹೆಚ್ಚುವರಿ ಪೋಲಿಸ ವರಿಷ್ಠಾಧಿಕಾರಿ ಶಂಕರ ಮಾರಿಹಾಳ, ದಲಿತ ಮುಖಂಡರ ಸಮಸ್ಯೆಗಳನ್ನು ಆಲಿಸಿ ಬೇಡಿಕೆಗಳನ್ನು ಈಡೇರಿಸುವುದಾಗಿ ತಿಳಿಸಿದರು. ಸಿಪಿಐ ಮಲ್ಲಿಕಾರ್ಜುನ ಡಪ್ಪಿನ ಸೇರಿದಂತೆ ತಾಲೂಕಿನ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು. ಸಭೆಯಲ್ಲಿ ಧರ್ಮರಾಜ ವಾಲಿಕಾರ, ಉತ್ತಮ ಕಟ್ಟಿಮನಿ, ಬಾಬು ಗುಡುಮಿ, ಧರ್ಮರಾಜ ಸಾಲೋಟಗಿ, ಧರೆಪ್ಪ ಮುಂದೋಲಿ, ಪೀರಪ್ಪ ಕಟ್ಟಿಮನಿ ಮತ್ತಿತರಿದ್ದರು.

# ಪುರಸಭೆ ನಿರ್ಲಕ್ಷ: ಡಾ.ಬಮ್ಮಣ್ಣಿ ರಸ್ತೆಯಲ್ಲಿ ಮಾಯವಾದ ನಾಮಫಲಕ

■ ಉದಯರಶ್ಮಿ ದಿನಪತ್ರಿಕೆ

■ ಮಹಾಂತೇಶ ನೂಲಾನವರ



ಸಿಂದಗಿ: ಅವರೊಬ್ಬ ಸಾಮಾಜಿಕ ಸೇವಾ ಕಾರ್ಯಕರ್ತ, ಸದಾ ಸಮಾಜ ಸೇವೆಗೆ ಕಂಕಣಬದ್ಧವಾದ ವ್ಯಕ್ತಿ, ತಾವಿರುವಷ್ಟು ದಿನ ಶಿಕ್ಷಣ, ಧಾರ್ಮಿಕ, ಸಮಾಜ ಸೇವೆ, ರಾಜಕೀಯ ಹೀಗೆ ಹಲವಾರು ಕ್ಷೇತ್ರಗಳಲ್ಲಿ ದುಡಿದು ಜನತೆಯ ಮನೆ ಮಾತಾದ ವ್ಯಕ್ತಿ ಅವರೇ ಡಾ.ಎಸ್.ಜಿ.ಬಮ್ಮಣ್ಣಿ. ಅಂತವರ ಹೆಸರಿನಿಂದ ನಿರ್ಮಾಣವಾದ ರಸ್ತೆಯ ನಾಮಫಲಕ ಪುರಸಭೆಯ ನಿರ್ಲಕ್ಷದಿಂದ ಮಾಯವಾಗಿರುವುದು ಖೇದಕರ. ಹೀಗಾಗಿ ಪಟ್ಟಣದ ಜನತೆ ಪುರಸಭೆ ಅಧಿಕಾರಿಗಳ ಕಾರ್ಯಕ್ಕೆ ಹಿಡಿಶಾಪ ಹಾಕುತ್ತಿದ್ದಾರೆ.

ಡಾ.ಸಿದ್ದಲಿಂಗಪ್ಪ ಜಿ. ಬಮ್ಮಣ್ಣಿ ಅವರು ವೃತ್ತಿಯಲ್ಲಿ ಒಬ್ಬ ವೈದ್ಯನಾಗಿ ಅವರು ಮಾಡಿದ ಸಾಮಾಜಿಕ ಸೇವೆ ನಿಜಕ್ಕೂ ಸಿಂದಗಿಯ ಜನತೆ ಇಂದಿಗೂ ಮರೆಯುವಂತಿಲ್ಲ. ಸಿಂದಗಿ ಸಾಂಸ್ಕೃತಿಕ ಕ್ಷೇತ್ರವಾಗಲು ಡಾ. ಎಸ್.ಜಿ.ಬಮ್ಮಣ್ಣಿ ಅವರ ಸೇವೆ ಅನನ್ಯ. ಕನ್ನಡ ನಾಡಿನ ಖ್ಯಾತ ಕವಿಗಳಾದ ನರಸಿಂಹಯ್ಯ, ದೇ. ಜವರೇಗೌಡರು, ಸಿದ್ದಯ್ಯ ಪುರಾಣಿಕ, ಪ್ರೋ ಸಂಗಮ, ಚಂಪಾ ಅವರಂತ ಅನೇಕ ಕವಿಗಳನ್ನು,ಸ್ವಾಮಿಜಿಗಳನ್ನು,ಕಲಾವಿದರನ್ನು ಸಿಂದಗಿಗೆ ಕರೆತಂದು ಸಿಂದಗಿಯ ಜನತೆಗೆ ಪರಿಚಯಿಸಿದವರು.

1968ರಲ್ಲಿ ಸಿಂದಗಿಯಲ್ಲಿ ಬಸವ ಸಮಿತಿಯನ್ನು ಸ್ಥಾಪಿಸಿ ಅದರ ಕಾರ್ಯಧ್ಯಕ್ಷರಾಗಿ ಅದರಡಿಯಲ್ಲಿ ಬಸವ ಪ್ರಜ್ಞೆ, ಕಲ್ಯಾಣ ನಾಡಿನ ಶರಣ ಸಾಹಿತ್ಯ ಸಮ್ಮೇಳನ, ಮೂಢ ನಂಬಿಕೆಗಳನ್ನು ದೂರ ಮಾಡಲು ಜಾಗೃತಿ ಕಾರ್ಯಕ್ರಮ, ಪ್ರತಿ ವರ್ಷ ಬಸವ ಜಯಂತಿ ಮತ್ತು ಅನೇಕ ಶರಣರ ಜಯಂತಿಗಳನ್ನು ಹಾಗೂ ವಚನ ಸುಧೆಗಳಂತ ಅನೇಕ ಕಾರ್ಯಕ್ರಮಗಳನ್ನು ನಾಡಿನ ಸಾಧಕರ ಮುಂದೆ ಮಾಡಿದವರು.

1965–66ರಲ್ಲಿ ಸಿಂದಗಿಯಲ್ಲಿ ನೆಹರು ಯುವ ಕೇಂದ್ರವನ್ನು ಸ್ಥಾಪಿಸಿ ಸಾರ್ವಜನಿಕ ಗ್ರಂಥಾಲಯವನ್ನು ಪ್ರಾರಂಭ ಮಾಡಿದವರು. ಲಾಯನ್ಸ್ ಕ್ಲಬ್‌ನ್ನು ಪ್ರಾರಂಭಿಸಿ ಅದರ ಸಂಸ್ಥಾಪಕ ಅಧ್ಯಕ್ಷರಾಗಿ ಅನೇಕ ಉಚಿತ ಆರೋಗ್ಯ ಕಾರ್ಯಕ್ರಮ ಹಮ್ಮಿಕೊಂಡವರು.

1972–73ರಲ್ಲಿ ಬರಗಾಲ ಬಿದ್ದ ಸಂಧರ್ಭದಲ್ಲಿ ಪಟ್ಟಣದ ಊರಿನ ಹಿರಿಯ ಮಠದಲ್ಲಿ ಗದುಗಿನ ಲಿಂ.ಜಗದ್ಗುರು ಡಾ. ತೋಂಟದ ಸಿದ್ದಲಿಂಗ ಮಹಾಸ್ವಾಮಿಗಳ ನೇತೃತ್ವದಲ್ಲಿ ಹಾಗೂ ಮೂರು ಸಾವಿರ ಮಠದ ಆಗಿನ ಪೂಜ್ಯರ ಅಧ್ಯಕ್ಷತೆಯಲ್ಲಿ ಗಂಜಿ ಕೇಂದ್ರವನ್ನು ಸ್ಥಾಪಿಸಿ ಬಡ ಜನತೆಯ ಹಸಿವಿಗೆ ದುಡಿದವರು.

1982ರಲ್ಲಿ ಗೋಕಾಕ ಚಳುವಳಿಯ ಸಂಧರ್ಭದಲ್ಲಿ ಗದುಗಿನ ಲಿಂ.ಜಗದ್ಗುರು ಡಾ.ತೋಂಟದ ಸಿದ್ದಲಿಂಗ ಮಹಾಸ್ವಾಮಿಗಳ ನೇತೃತ್ವದಲ್ಲಿ ನಡೆದ ಹೋರಾಟದಲ್ಲಿ ಸಿಂದಗಿಯ ಪತ್ರಿಕಾ ಭೀಷ್ಮ ದಿ.ರೇ.ಚ. ರೇವಡಿಗಾರ ಅವರ ಜೊತೆಯಾಗಿ ಹೋರಾಟ ಮಾಡಿದವರು. ಊರಿನ ಹಿರಿಯ ಮಠದಲ್ಲಿ ಶ್ರೀಗಳ ಆಶಯದಂತೆ ವಿದ್ಯಾರಣ್ಯ ವಾಚನಾಲಯ ಸ್ಥಾಪಿಸಿ ಅನೇಕರಿಗೆ ಓದುವ ಹವ್ಯಾಸವನ್ನು ಬೆಳೆಸಿದವರು. ಕನ್ನಡ ಬಳಗದ ಹುಟ್ಟಿಗೆ ಕಾರಣರಾದವರು ಡಾ.ಬಮ್ಮಣ್ಣಿ. ಸಾಮಾಜಿಕ ಸೇವೆಯೊಂದಿಗೆ ಪುರಸಭೆಯ ಅಧ್ಯಕ್ಷರಾಗಿ ಸಿಂದಗಿ ಪಟ್ಟಣದ ಜನತೆಯ ಸೇವೆ ಮಾಡಿದಂತ ಕೀರ್ತಿ ಡಾ. ಎಸ್.ಜಿ.ಬಮ್ಮಣ್ಣಿ ಅವರಿಗೆ ಸಲ್ಲುತ್ತದೆ.



ಸಿಂದಗಿ ಶೈಕ್ಷಣಿಕವಾಗಿ ಹೆಮ್ಮರವಾಗಬೇಕು ಎಂಬ ಸಾರಂಗಮಠದ ಲಿಂ.ಚೆನ್ನವೀರ ಮಹಾ ಸ್ವಾಮಿಗಳ ಕನಸಿಗೆ ಅನೇಕರೊಂದಿಗೆ ಬಲವಾಗಿ ನಿಂತು ಶ್ರೀ ಪದ್ಮರಾಜ ವಿದ್ಯಾವರ್ಧಕ ಸಂಸ್ಥೆ ಬೆಳೆಯುವಲ್ಲಿ ಶ್ರೀಗಳೊಂದಿಗೆ ಸದಾ ಸಹಕರಿಸುತ್ತಾ ಸಂಸ್ಥೆಯನ್ನು ಬೆಳೆಸಿ ಪ್ರಾರಂಭದ ಹಂತದಲ್ಲಿ ಕಾರ್ಯಾಧ್ಯಕ್ಷರಾಗಿ ದುಡಿದವರು.

ಇಂತಹ ಮಹಾನ ಚೇತನ ಇರುವಷ್ಟು ದಿನ ಸಮಾಜದ ಬೆಳವಣಿಗೆಗೆ ಕಂಕಣ ಬದ್ದರಾದವರು. ಅವರು ವೈದ್ಯರಾಗಿ ಬಹುಪಾಲು ಉಚಿತ ಆರೋಗ್ಯ ಸೇವೆಯನ್ನೆ ಮಾಡಿದರು.

ಅವರು 1989ರಲ್ಲಿ ನಿಧನದ ನಂತರ ಸಿಂದಗಿಯ ಅನೇಕ ಯುವಕರು ಸೇರಿ ಅವರನ್ನು ಸ್ಮರಿಸುವ ಉದ್ದೇಶದಿಂದ ಅವರ ಹೆಸರು ಚಿರಸ್ಥಾಯಿಯಾಗಿ ಉಳಿಯಲು ಸಂಗಮ ಹೊಟೇಲ ಬಲ ಭಾಗದ ರಸ್ತೆಗೆ ಅವರ ಹೆಸರನ್ನು ಪುರಸಭೆಯಲ್ಲಿ 1989ರ ಸಮಯದಲ್ಲಿಯೇ ಅಧಿಕೃತವಾಗಿ ಠರಾವು ಪಾಸ ಮಾಡಿ ಹೆಸರಿಟ್ಟು ನಾಮ ಫಲಕವನ್ನು ಅಳವಡಿಸಿದ್ದರು. ಆದರೆ ಅನೇಕ ವರ್ಷಗಳಿಂದ ಆ ನಾಮಫಲಕ ಕಳೆದು ಹೋಗಿದ್ದರೂ ಪುರಸಭೆ ಯಾವುದೇ ಕ್ರಮ ಕೈಗೊಳ್ಳದಿರುವುದು ನಿಜಕ್ಕೂ ಬೇಸರದ ಸಂಗತಿ. ಅವರ ಕಾರ್ಯಗಳು, ಹೋರಾಟ, ಸೃಜನಶೀಲತೆ ಮುಂದಿನ ಯುವ ಜನಾಂಗಕ್ಕೆ ಪ್ರೇರಣೆಯಾಗಲು ಅವರ ಹೆಸರು ಉಳಿಯಲೇಬೇಕು. ಹೀಗಾಗಿ ಅವರ ಹೆಸರಿನ ರಸ್ತೆಯ ನಾಮಫಲಕವನ್ನು ಮರು ಸ್ಥಾಪಿಸುವ ಕಾರ್ಯವಾಗಬೇಕು ಎನ್ನುವ ಅಭಿಲಾಷೆ ಸಿಂದಗಿಯ ಹಿರಿಯ ನಾಗರಿಕರದ್ದಾಗಿದೆ.

"ಡಾ.ಬಮ್ಮಣ್ಣಿ ಸಿಂದಗಿ ಪಟ್ಟಣದ ಜನತೆಗೆ ಶಿಕ್ಷಣ, ಆರೋಗ್ಯ, ಧಾರ್ಮಿಕ ಹೀಗೆ ಅನೇಕ ಸಾಮಾಜಿಕ ಸೇವೆ ಮಾಡಿ ಮಡಿದವರು. ಅವರ ಹೆಸರಿನ ರಸ್ತೆಗೆ ಇಂದು ನಾಮಫಲಕ ಇಲ್ಲದಿರುವುದು ನಿಜಕ್ಕೂ ಒಂದು ದೊಡ್ಡ ಅಪಮಾನ. ಪುರಸಭೆ ಮುಂದಿನ ದಿನಗಳಲ್ಲಿ ನಾಮಫಲಕವನ್ನು ಅಳವಡಿಸಿ ಅವರಿಗೆ ಗೌರವ ಸಲ್ಲಿಸಬೇಕು ಎಂದು ಸಾರ್ವಜನಿಕರ ಪರವಾಗಿ ನಾನು ವಿನಂತಿಸುತ್ತೇನೆ."

■ - ಮಹಾನಂದ ಬಮ್ಮಣ್ಣಿ
ಕೆಡಿಪಿ ಸದಸ್ಯೆ

"ರಸ್ತೆ ಅವರ ಹೆಸರಿನಲ್ಲಿ ಠರಾವು ಪಾಸ್ ಆಗಿರುವ ಬಗ್ಗೆ ನನಗೆ ತಿಳಿದಿಲ್ಲ. ನಾನು ಬಂದಾಗಿನಿಂದಲೂ ಅಲ್ಲಿ ಯಾವುದೇ ನಾಮಫಲಕ ಇರಲಿಲ್ಲ. ಮುಂದಿನ ದಿನಗಳಲ್ಲಿ ಇದರ ಬಗ್ಗೆ ಎಲ್ಲವನ್ನು ಪರಿಶೀಲನೆ ಮಾಡಿ ರಸ್ತೆಗೆ ನಾಮಫಲಕ ಇತ್ತೋ ಇಲ್ಲವೋ ಎನ್ನುವ ಠರಾವು ನೋಡುತ್ತೇನೆ.

■ - ಸುರೇಶ ನಾಯಕ
ಪುರಸಭೆ ಮುಖ್ಯಾಧಿಕಾರಿ, ಸಿಂದಗಿ

## ಶರಣ ಸಾಹಿತ್ಯ ಪರಿಷತ್ತಿನಿಂದ ಶರಣ ಸಂಸ್ಕೃತಿ ಪ್ರಸಾರ: ವೀಣಾ



■ ಉದಯರಶ್ಮಿ ದಿನಪತ್ರಿಕೆ

ಬಸವನಬಾಗೇವಾಡಿ: 12 ನೇ ಶತಮಾನದ ಬಸವಾದಿ ಶರಣರ ಸಂಸ್ಕೃತಿಯನ್ನು ನಾಡಿನ ಜನತೆಗೆ ಮುಟ್ಟಿಸುವಲ್ಲಿ ಶರಣ ಸಾಹಿತ್ಯ ಪರಿಷತ್ತು ವಿವಿಧ ಕಾರ್ಯಕ್ರಮಗಳನ್ನು ನಿರಂತರವಾಗಿ ಹಮ್ಮಿಕೊಳ್ಳುತ್ತಿರುವುದು ಶ್ಲಾಘನೀಯ. ಶರಣ ಸಂಸ್ಕೃತಿಯನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಂಡರೆ ಉತ್ತಮ ಸಮಾಜ ನಿರ್ಮಾಣಕ್ಕೆ ಪೂರಕವಾಗುತ್ತದೆ ಎಂದು ನಂದಿ ಪ್ರಾಥಮಿಕ, ಪ್ರೌಢಶಾಲೆಯ ಮುಖ್ಯಗುರುಮಾತೆ ವೀಣಾ ಪೂಜಾರಿ ಹೇಳಿದರು.

ಪಟ್ಟಣದ ಮಸಬಿನಾಳ ರಸ್ತೆಯಲ್ಲಿ ನಂದಿ ಪ್ರಾಥಮಿಕ, ಪ್ರೌಢಶಾಲೆಯಲ್ಲಿ ತಾಲೂಕು ಶರಣ ಸಾಹಿತ್ಯ ಪರಿಷತ್ತು ಲಿಂ.ಶಾಂತಾಬಾಯಿ ಮಲ್ಲಪ್ಪ ಕೊಟ್ಲಿ, ಮಲ್ಲಪ್ಪ ಸದಾಶಿವಪ್ಪ ಕೊಟ್ಲಿ ಸ್ಮರಣಾರ್ಥ ಹಮ್ಮಿಕೊಂಡಿದ್ದ ದತ್ತಿ ಉಪನ್ಯಾಸ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಶರಣ ಸಾಹಿತ್ಯ ಪರಿಷತ್ತು ಹಮ್ಮಿಕೊಳ್ಳುವ ಕಾರ್ಯಕ್ರಮದಲ್ಲಿ ಹೆಚ್ಚು ಯುವಜನಾಂಗ ಭಾಗವಹಿಸುವ ಮೂಲಕ ಶರಣ ಸಂಸ್ಕೃತಿಯನ್ನು ಉಳಿಸಿಕೊಂಡು ಅದನ್ನು ಜೀವನದಲ್ಲಿ ಅಳವಡಿಸಿಕೊಳ್ಳುವಂತಾಗಬೇಕು. ಯುವಜನಾಂಗ ಉತ್ತಮ ವ್ಯಕ್ತಿತ್ವ ರೂಪಿಸಿಕೊಂಡರೆ ಅವರ ಜೀವನ ಉಜ್ವಲವಾಗುತ್ತದೆ ಎಂದರು.

ಜನಪದರು ಕಂಡ ಶರಣರು ಕುರಿತು ಕನ್ನಡ ಜಾನಪದ ಪರಿಷತ್ತಿನ ತಾಲೂಕಾಧ್ಯಕ್ಷ ದೇವೇಂದ್ರ ಗೋನಾಳ ಮಾತನಾಡಿ, ಶರಣ ಸಾಹಿತ್ಯ, ಜನಪದ ಸಾಹಿತ್ಯ ಎರಡು ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ. ಈ ಎರಡು ಸಾಹಿತ್ಯಗಳು ಒಂದಕ್ಕೊಂದು ಸಂಬಂಧ ಹೊಂದಿವೆ. ಶರಣರ ಅನುಭಾವವನ್ನು ಜನಪದರು ತಮ್ಮ ಕಾಯಕ ಮಾಡುವಾಗ ಶರಣರನ್ನು ಸ್ಮರಿಸಿಕೊಂಡು ಲಾವಣಿ, ಗೀತೆ, ಜೋಗುಳ ಪದ ಸೇರಿದಂತೆ ವಿವಿಧ ರೀತಿಯಲ್ಲಿ ಹಾಡಿರುವದನ್ನು ನೋಡುತ್ತೇವೆ ಎಂದರು.

ಶರಣರದ್ದು ಕಾಯಕ, ದಾಸೋಹ ಸಂಸ್ಕೃತಿಯಾದರೆ, ಜನಪದರದ್ದು ಶ್ರಮ ಸಂಸ್ಕೃತಿಯಾಗಿದೆ. ಜನಪದರು ತಮ್ಮ ಹೆಸರು ಬಯಸದೇ ಶರಣರ ಸಂಸ್ಕೃತಿ ಮೌಲ್ಯಗಳನ್ನು ಮೌಖಿಕವಾಗಿ ನಿರಂತರವಾಗಿ ಸಮಾಜದಲ್ಲಿ ಇಟ್ಟುಕೊಂಡು ಬಂದಿರುವುದನ್ನು ಕಾಣುತ್ತೇವೆ. ಜನಪದ ಸಾಹಿತ್ಯದಲ್ಲಿ ಎಲ್ಲ ಶರಣರ ಸಂದೇಶ, ಜೀವನ ಇರುವುದು ಕಂಡುಬರುತ್ತದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ತಾಲೂಕು ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವೀರಣ್ಣ ಮರ್ತೂರ ಮಾತನಾಡಿ, ಶರಣ ಸಾಹಿತ್ಯ ಪರಿಷತ್ತಿನ ಸದಸ್ಯರಾಗುವ ಜೊತೆಗೆ ದತ್ತಿ ನಿಧಿ ನೀಡುವ ಮೂಲಕ ಶರಣ ಸಾಹಿತ್ಯ ಪರಿಷತ್ತಿಗೆ ಸಹಕಾರ ನೀಡಬೇಕೆಂದರು.

ಕಾರ್ಯಕ್ರಮದಲ್ಲಿ ದತ್ತಿ ದಾನಿ ಬಸವರಾಜ ಕೊಟ್ಲಿ, ಪ್ರೊ.ಪಿ.ಎಲ್.ಹಿರೇಮಠ, ಆರ್.ಜಿ.ಅಳ್ಳಗಿ, ರವಿಗೌಡ ಚಿಕ್ಕೊಂಡ, ಸಂಗಪ್ಪ ಬಶೆಟ್ಟಿ, ಶ್ರೀಶೈಲ ಶಿರಗುಪ್ಪಿ, ಸಾವಿತ್ರಿ ಕಲ್ಯಾಣಶೆಟ್ಟಿ, ವಿವೇಕಾನಂದ ಕಲ್ಯಾಣಶೆಟ್ಟಿ, ಸಿ.ಎಲ್. ಮುರಾಳ, ಅಶೋಕ ಗುಡದಿನ್ನಿ ಇತರರು ಇದ್ದರು.

ಕದಳಿ ವೇದಿಕೆಯ ಅಧ್ಯಕ್ಷೆ ಸಾವಿತ್ರಿ ಕಲ್ಯಾಣಶೆಟ್ಟಿ ಪ್ರಾಸ್ತವಿಕವಾಗಿ ಮಾತನಾಡಿದರು.

## ಬೆಂಕಿಗೆ ಆಹುತಿಯಾದ ಎಲೆಕ್ಟ್ರಿಕ್ ಆಟೋ

**ಕಲಬುರಗಿ** : ನಗರದ ಗಂಜ್ ಪ್ರದೇಶದ ನಗರೇಶ್ವರ ಶಾಲೆಯ ಮುಂಭಾಗದ ರಸ್ತೆಯಲ್ಲಿ ಎಲೆಕ್ಟ್ರಿಕ್ ಆಟೋವೊಂದು ಹೊತ್ತಿ ಉರಿದ ದುರ್ಘಟನೆ ಸಂಭವಿಸಿದೆ.

ಘಟನೆಯಲ್ಲಿ ಚಾಲಕ ಮತ್ತು ಪ್ರಯಾಣಿಕರು ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಫಿಲ್ಟರ್ ಬೆಡ್ ಸಮೀಪದ ವಿಷ್ಣು ನಗರ ನಿವಾಸಿ ವಿಶ್ವನಾಥ ಜಾಧವ ಎಂಬುವವರಿಗೆ ಸೇರಿದ ಎಲೆಕ್ಟ್ರಿಕ್ ಆಟೋಗೆ ಬೆಂಕಿ ಹತ್ತಿಕೊಂಡಿದೆ. ವಿಶ್ವನಾಥ ಅವರು ಪ್ರಯಾಣಿಕರೊಬ್ಬರನ್ನು ಆಟೋದಲ್ಲಿಕರೆದೊಯ್ಯುತ್ತಿದ್ದರು.ಸೀಟ್ ಹಿಂಬದಿ ಬಿಸಿಯಾಗುತ್ತಿದೆ ಎಂದು ಹೇಳಿ ಪ್ರಯಾಣಿಕ ಕೆಳಗಿಳಿದರು.ಅಷ್ಟರಲ್ಲಿ ಎಂಜಿನಿನಲ್ಲಿ ಬೆಂಕಿ



ಕಾಣಿಸಿಕೊಂಡಿತು.ಕೆಲವೇ ಕ್ಷಣಗಳಲ್ಲಿ ಬೆಂಕಿಯು ಆಟೋವನ್ನು ವ್ಯಾಪಿಸಿತು ಎಂದು ತಿಳಿದುಬಂದಿದೆ.

## ಭಗತಸಿಂಗ್ ಯುವಜನಾಂಗಕ್ಕೆ ಸದಾ ಸ್ಫೂರ್ತಿ: ಶಂಕರಗೌಡ



■ ಉದಯರಶ್ಮಿ ದಿನಪತ್ರಿಕೆ

ಬಸವನಬಾಗೇವಾಡಿ: ಅಪ್ರತಿಮ ದೇಶಭಕ್ತ ಭಗತಸಿಂಗ್ ಕೇವಲ ದೇಶಕ್ಕೆ ಸ್ವಾತಂತ್ರ್ಯ ಮಾತ್ರ ಬಯಸದೇ ಪ್ರತಿಯೊಬ್ಬ ಭಾರತೀಯನಿಗೂ ಸಮಾನತೆ ಸಿಗುವ ಜೊತೆಗೆ ಜಾತಿ, ಧರ್ಮಗಳಿಂದ ಮುಕ್ತವಾದ ಯುವ ಭಾರತದ ಪರಿಕಲ್ಪನೆಯ ಸ್ವಾತಂತ್ರ್ಯವನ್ನು ಬಯಸಿದ್ದರು. ಇಂತಹ ಮಹಾನ್ ಕ್ರಾಂತಿಕಾರಿ ಪುರುಷ ಎಂದಿಗೂ ಯುವಜನಾಂಗಕ್ಕೆ ಸ್ಫೂರ್ತಿದಾಯಕವಾಗಿದ್ದಾರೆ ಎಂದು ರಾಷ್ಟ್ರೀಯ ಬಸವಸೈನ್ಯ ಸಂಸ್ಥಾಪಕ ಅಧ್ಯಕ್ಷ ಶಂಕರಗೌಡ ಬಿರಾದಾರ ಹೇಳಿದರು.

ಪಟ್ಟಣದ ರಾಣಿ ಚನ್ನಮ್ಮ ವೃತ್ತದಲ್ಲಿ ರಾಷ್ಟ್ರೀಯ ಬಸವಸೈನ್ಯ ಸಂಘಟನೆಯು ಶನಿವಾರ ಹಮ್ಮಿಕೊಂಡಿದ್ದ ಕ್ರಾಂತಿಕಾರಿ ಭಗತಸಿಂಗ್ ಅವರ 117 ನೇ ಜಯಂತಿ ಕಾರ್ಯಕ್ರಮದಲ್ಲಿ ಭಗತ್ಸಿಂಗ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದ ಅವರು, ಅಸಮಾನತೆ ವ್ಯವಸ್ಥೆಯನ್ನು ಹೋಗಲಾಡಿಸಿ ಬದಲಾವಣೆ ತರಲು ಭಗತ್ಸಿಂಗ್ ನಿರಂತರವಾಗಿ ಹೋರಾಟ ಮಾಡಿದ್ದರು. ದೇಶದ ಸ್ವಾತಂತ್ರ್ಯ ಹೋರಾಟದಲ್ಲಿ ಬ್ರಿಟಿಷರಿಗೆ ಸಿಂಹಸ್ವಪ್ನವಾಗುವ ಮೂಲಕ ಸ್ವಾತಂತ್ರ್ಯ ಹೋರಾಟದಲ್ಲಿ ತಮ್ಮದೇ ಕೊಡುಗೆ ನೀಡಿದ್ದಾರೆ. ತಮ್ಮ ಚಿಕ್ಕವಯಸ್ಸಿನಲ್ಲಿಯೇ ದೇಶದ ಸ್ವಾತಂತ್ರ್ಯ ಸಿಗಲು ತಮ್ಮ ಪ್ರಾಣವನ್ನೇ ತ್ಯಾಗ ಮಾಡಿದ ಅಪ್ರತಿಮ ದೇಶಭಕ್ತರಾಗಿದ್ದಾರೆ. ಇವರ ವಿಚಾರಗಳನ್ನು ಯುವಜನಾಂಗ ಅರಿತುಕೊಂಡು ದೇಶದ ಪ್ರಗತಿಗೆ ಕೈಜೋಡಿಸಬೇಕೆಂದರು.

ಈ ಸಂದರ್ಭದಲ್ಲಿ ಸುನೀಲ ಚಿಕ್ಕೊಂಡ, ಸಂಜೀವ ಬಿರಾದಾರ, ನಿಂಗಪ್ಪ ಅವಟಿ, ಮನ್ನಾನ ಶಾಬಾದಿ, ಮಲ್ಲು ಬನಾಸಿ, ಮಹಾಂತೇಶ ಹೆಬ್ಬಾಳ, ಅಮೀನ ಚೌದರಿ, ಸಲೀಂ ಸಯ್ಯದ, ದಯಾನಂದ ಜಾಲಗೇರಿ, ಸಂಗಮೇಶ ಕಲ್ಲೂರ, ಸುರೇಶ ಚಿಕ್ಕೊಂಡ, ರಾಮಣ್ಣ ಕಲ್ಲೂರ, ಬಸವರಾಜ ಮಾಲಗಾರ, ಅನಿಲ ಬೋಂಸ್ಲೆ, ವಿರೇಶ ಗಬ್ಬೂರ, ದೀಪಕ ಬೇದರಕರ ಇತರರು ಇದ್ದರು.

## ರೆಬಿಸ್ ನಿರ್ಮೂಲನೆಗೆ ಲಸಿಕೆಯೊಂದೇ ಮಾರ್ಗ: ಡಾ.ಪ್ರಭು



■ ಉದಯರಶ್ಮಿ ದಿನಪತ್ರಿಕೆ

ಯಡ್ರಾಮಿ: ರೆಬಿಸ್ ಇದೊಂದು ಮಾರಕ ರೋಗವಿದ್ದು, ಒಮ್ಮೆ ರೆಬಿಸ್ ಆಗಿದೆ ಎಂದರೆ ಸಾವು ಖಚಿತವಾಗಿದೆ ಎಂಬುದು ತಿಳಿಯಬೇಕು ಎಂದು ತಾಲೂಕು ಪಶು ವೈದ್ಯಾಧಿಕಾರಿ ಡಾ.ಪ್ರಭು ಕಲ್ಲೂರ ಹೇಳಿದರು.

ತಾಲೂಕಿನ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಶನಿವಾರ ಪಶು ಪಾಲನ ಮತ್ತು ಪಶುವೈದ್ಯ ಸೇವಾ ಇಲಾಖೆ ಆಯೋಜಿಸಿದ್ದ ವಿಶ್ವ ರೆಬಿಸ್ ದಿನಾಚರಣೆಯ ಅಂಗವಾಗಿ ರೋಗದ ಅರಿವು ಮತ್ತು ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ರೇಬೀಸ್ ನಿರ್ಮೂಲನೆಗೆ ಲಸಿಕೆ ಒಂದೇ ಮಾರ್ಗ. ಇದರ ಬಗ್ಗೆ ವಿದ್ಯಾರ್ಥಿಗಳಾದವರು ಅರಿತುಕೊಂಡು ತಮ್ಮ ಮನೆಯಲ್ಲಿ ಮತ್ತು ತಮ್ಮ ಸುತ್ತಲಿನ ಜನತೆಗೆ ತಿಳಿ ಹೇಳಬೇಕೆಂದರು. ಹುಚ್ಚು ನಾಯಿ ಕಡಿದರೆ ತಕ್ಷಣವೇ ಲಸಿಕೆ ಪಡೆದರೆ ಜೀವ ಉಳಿಸಿದಂತಾಗುತ್ತದೆ. ಈ ಕುರಿತು ಪ್ರತಿಯೊಬ್ಬರು ತಿಳಿಯಬೇಕಾದ ಅಗತ್ಯವಿದೆ ಎಂದರು.

ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಂಶುಪಾಲ ದೇವೀಂದ್ರ ಬಡಿಗೇರ, ಅತಿಥಿ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳಿದ್ದರು.

## ಮಹಾತ್ಮರಂತೆ ನಮ್ಮ ಬದುಕು ಬೆಳಕಾಗಬೇಕು : ದೇವನೂರು

■ ಉದಯರಶ್ಮಿ ದಿನಪತ್ರಿಕೆ



ಬಸವನಬಾಗೇವಾಡಿ: ಬದುಕು ಬೆಳಕಾಗಬೇಕು. ಬದುಕು ಬಯಲಾಗಬೇಕು. ಇದುವೇ ಜೀವನ ಎಂಬುದನ್ನು ನಾವೆಲ್ಲರೂ ಅರಿತುಕೊಳ್ಳಬೇಕು. ನಿಸರ್ಗದಲ್ಲಿ ಭಗವಂತ ನಮಗೆ ಎಲ್ಲವನ್ನು ನೀಡಿದ್ದಾನೆ. ಇದನ್ನು ನಾವೆಲ್ಲರೂ ಅನುಭವಿಸಿ ಸುಂದರ ಜೀವನ ಸಾಗಿಸಬೇಕೆಂದು ವಿಶ್ರಾಂತ ಮುಖ್ಯ ಅಭಿಯಂತರ, ಆಧ್ಯಾತ್ಮಿಕ ಚಿಂತಕ ಶಂಕರ ದೇವನೂರು ಹೇಳಿದರು.

ಪಟ್ಟಣದ ಬಸವೇಶ್ವರ ಕಲ್ಯಾಣ ಮಂಟಪದಲ್ಲಿ ಅಕ್ಕನಾಗಮ್ಮ ಬಾಲಕಿಯರ ಸರ್ಕಾರಿ ಪ್ರೌಢಶಾಲೆ ಶನಿವಾರ ಹಮ್ಮಿಕೊಂಡಿದ್ದ ಸ್ಫೂರ್ತಿ ಸಿಂಚನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನಮ್ಮ ಜೀವನ ಹೂವಿನಂತಾಗಬೇಕು. ಇದು ಬಸವೇಶ್ವರರ ಪವಿತ್ರ ಭೂಮಿಯಾಗಿದೆ. ಮಹಾತ್ಮರು ನುಡಿದಂತೆ ನಡೆದು ಬೆಳಕಾಗಿದ್ದಾರೆ. ಅದರಂತೆ ನಮ್ಮ ಜೀವನ ಬೆಳಕಾಗಬೇಕು. ವಿದ್ಯಾರ್ಥಿಗಳು ನಿರಂತರ ಅಧ್ಯಯನ ಮಾಡುವ ಮೂಲಕ ತಮ್ಮ ಜೀವನವನ್ನು ಉತ್ತಮ ಪಡಿಸಿಕೊಳ್ಳಬೇಕೆಂದರು.

ಬಸವನಿಲ್ಲದ ಕರ್ನಾಟಕ ರಾಜ್ಯವನ್ನು ಪರಿಗಣಿಸಲು ಸಾಧ್ಯವಿಲ್ಲ. ಬಸವೇಶ್ವರರನ್ನು ಸ್ಮರಿಸದೇ ರಾಜ್ಯವನ್ನು ಸ್ಮರಿಸಲು ಸಾಧ್ಯವಿಲ್ಲ. ಬಸವ ತತ್ವ ಎಲ್ಲವನ್ನು ಒಳಗೊಂಡಿದೆ. ಬಸವಾದಿ ಶರಣರ ವಚನಗಳು ಎಲ್ಲರ ಬದುಕಿಗೆ ಬೆಳಕಾಗಿವೆ. ಶಿಕ್ಷಣ, ತತ್ವ ನಮ್ಮ ಬದುಕನ್ನು ನರಳಿಸಬಾರದು. ಅದು ಅರಳಿಸುವಂತಿರಬೇಕೆಂದರು.

ಸಾನಿಧ್ಯ ವಹಿಸಿದ್ದ ಕಜ್ಜಿಡೋಣಿಯ ಕೃಷ್ಣಾನಂದ ಶರಣರು ಮಾತನಾಡಿ, ವಿದ್ಯಾರ್ಥಿಗಳು ಕೇವಲ ಅಂಕ ಪಡೆಯುವುದೇ ಮುಖ್ಯವಾಗಿಟ್ಟುಕೊಳ್ಳದೇ ಜೀವನ ಹೇಗೆ ರೂಪಿಸಿಕೊಳ್ಳಬೇಕೆಂಬುವದರ ಕಡೆಗೆ ಗಮನ ಗಮನಹರಿಸಬೇಕು. ವಿದ್ಯಾರ್ಥಿಗಳು ಒಬ್ಬ ಸಾಧಕನ ರೀತಿಯಲ್ಲಿ ನಿರಂತರವಾಗಿ ಅಧ್ಯಯನಶೀಲರಾಗಿ ಉತ್ತಮ ಅಧ್ಯಯನ ಮಾಡುವಂತಾದರೆ ಜೀವನವನ್ನು ಸುಂದರವಾಗಿ ಮಾಡಿಕೊಳ್ಳಲು ಸಾಧ್ಯವಿದೆ. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ನಿರಂತರ ಅಧ್ಯಯನಶೀಲರಾಗಿ ಉತ್ತಮ ಪ್ರಜೆಗಳಾಗಿ ನಾಡಿಗೆ ಸೇವೆ ಸಲ್ಲಿಸುವಂತಾಗಬೇಕೆಂದರು.

ಸಾನಿಧ್ಯ ವಹಿಸಿದ್ದ ವಿರಕ್ತಮಠದ ಸಿದ್ದಲಿಂಗ ಸ್ವಾಮೀಜಿ ಮಾತನಾಡಿದರು.

ಅಧ್ಯಕ್ಷತೆಯನ್ನು ಅಕ್ಕನಾಗಮ್ಮ ಬಾಲಕಿಯರ ಸರ್ಕಾರಿ ಪ್ರೌಢಶಾಲೆ ಮುಖ್ಯಗುರು ಕೆ. ಆರ್.ಲಮಾಣಿ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಮೈಸೂರಿನ ಯೋಗೇಶ್ವರಿ, ಹಿರಿಯ ಶಿಕ್ಷಕಿ ಮಾಲತಿ ಬಿದರಿ, ನಿವೃತ್ತ ಉಪಪ್ರಾಂಶುಪಾಲ ಎಸ್.ಎಸ್. ಝಳಕಿ, ನಿಕಟಪೂರ್ವ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಶಿವರುದ್ರಯ್ಯ ಹಿರೇಮಠ, ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಶಿವಾನಂದ ಡೋಣೂರ ಇತರರು ಇದ್ದರು.

ಅಶೋಕ ಹಂಚಲಿ ಸ್ವಾಗತಿಸಿ, ನಿರೂಪಿಸಿದರು. ಶಿವು ಮಡಿಕೇಶ್ವರ ವಂದಿಸಿದರು.

## ಕೃಷಿಕರ ಸುಸ್ಥಿರ ಬದುಕಿಗೆ ಸಾಮೂಹಿಕ ಕೃಷಿಯೊಂದೆ ಪರಿಹಾರ

■ ಉದಯರಶ್ಮಿ ದಿನಪತ್ರಿಕೆ



ಮುದ್ದೇಬಿಹಾಳ: ಕೃಷಿಯಲ್ಲಿ ಹೆಚ್ಚುತ್ತಿರುವ ಚಿಕ್ಕ ಹಿಡುವಳಿಗಳು, ಬದಲಾಗುತ್ತಿರುವ ಕೃಷಿ ಆದ್ಯತೆಗಳು ಹಾಗೂ ಮರೆಯಾಗುತ್ತಿರುವ ಸಮಗ್ರ ಕೃಷಿ ಪದ್ಧತಿಗಳಿಂದ ದೇಶದ ಕೃಷಿಕರ ಬದುಕಿನಲ್ಲಿ ಉಂಟಾದ ವಿಷಮತೆಯನ್ನು ತೊಡೆದು ಹಾಕಲು ಸಾಮೂಹಿಕ ಕೃಷಿಯೊಂದೆ ಪರಿಹಾರವೆಂದು ನಂಬಲಾಗುತ್ತಿರುವ ಪ್ರಸ್ತುತ ಕಾಲಘಟ್ಟದಲ್ಲಿ ರೈತರೇ ಒಗ್ಗೂಡಿ ಕಟ್ಟಿದ ಕಂಪನಿ ರೈತ ಪಾಲಿನ ಅಕ್ಷಯ ಪಾತ್ರೆಯಾಗಬೇಕು ಎಂದು ಪಶು ಪಾಲನೆ ಮತ್ತು ಪಶು ವೈದ್ಯಕೀಯ ಇಲಾಖೆಯ ಕುಕ್ಕುಟ ವಿಭಾಗದ ಸಹಾಯಕ ನಿರ್ದೇಶಕಿ ಡಾ. ಪದ್ಮಾವತಿ ದೊಡಮನಿ ಕರೆ ನೀಡಿದರು.

ಪಟ್ಟಣದ ಹಡಲಗೇರಿ ರಸ್ತೆಯಲ್ಲಿರುವ ಪದ್ಮಾವತಿ ಕಲ್ಯಾಣ ಮಂಟಪದಲ್ಲಿ ಆಯೋಜಿಸಲಾಗಿದ್ದ ದಾಸೋಹಿ ಕುಕ್ಕುಟ ರೈತ ಉತ್ಪಾದಕ ಕಂಪನಿ ನಿಯಮಿತದ ವಾರ್ಷಿಕ ಸಾಮಾನ್ಯ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಾರುಕಟ್ಟೆಯ ಬೇಡಿಕೆ ಮತ್ತು ಪೂರೈಕೆಯನ್ನು ಗಮನದಲ್ಲಿಟ್ಟುಕೊಂಡು ಸದಸ್ಯ ರೈತರಿಗೆ ಸುಸ್ಥಿರ ಲಾಭ ತಂದು ಕೊಡಬಹುದಾದ ವಿಶೇಷ ವ್ಯವಹಾರಿಕ ಯೋಜನೆಗಳನ್ನು ಕೈಗೆತ್ತಿಕೊಳ್ಳುವ ಮೂಲಕ ಉತ್ಪಾದನಾ ತಾಂತ್ರಿಕತೆಗಳಿಂದ ಹಿಡಿದು ಸ್ವಂತ ಬ್ರ್ಯಾಂಡ್ ಹೆಸರಲ್ಲಿ ಮಾರುಕಟ್ಟೆ ಮಾಡುವ ಮಟ್ಟಕ್ಕೆ ಉತ್ಪಾದಕ ಕಂಪನಿಯನ್ನು ಬೆಳೆಸಲು ಬೇಕಾದ ಸಾಮಾಜಿಕ ಚಿಂತನೆ, ವ್ಯವಹಾರಿಕ ಯೋಜನೆ ಮತ್ತು ಅನುಷ್ಠಾನ ಬದ್ಧತೆಯೊಂದಿಗೆ ಕೆಲಸ ಆರಂಭಿಸಿದ ದಾಸೋಹಿ ಕಂಪನಿ ಇತರರಿಗೆ ಮಾದರಿಯಾಗಲಿದೆ ಎಂದರು.

ಮುಖ್ಯ ಅತಿಥಿಯಾಗಿದ್ದ ವಿಜಯಪುರ ಜಿಲ್ಲೆಯ ಅಗ್ರಣೀಯ ಬ್ಯಾಂಕ ವ್ಯವಸ್ಥಾಪಕ ನೇತಾಜಿ. ಡಿ ಮಾತನಾಡಿ ಕೃಷಿ ವ್ಯವಹಾರಗಳಿಗೆ ಸಂಬಂದಿತ ಹಣಕಾಸು ಸೇವೆಗಳನ್ನು ರೈತರ ಮನೆ ಬಾಗಿಲಿಗೆ ತೆಗೆದುಕೊಂಡು ಹೋಗಬೇಕೆಂಬ ಕನಸನ್ನು ನನಸು ಮಾಡಲು ರೈತರು ಸೇರಿ ಕಟ್ಟಿರುವ ಕಂಪನಿ ಒಂದು ಉತ್ತಮ ಭೂಮಿಕೆಯಾಗಿದ್ದು ಸದಸ್ಯ ರೈತರಿಗೆ ಕೃಷಿ ಮತ್ತು ಉಪ ಕೃಷಿ ಚಟುವಟಿಕೆಗಳಿಗೆ ಅಗತ್ಯವಿರುವ ಸಾಲದ ನೆರವು, ಸರ್ಕಾರಿ ಯೋಜನೆಗಳ ಸಬ್ಸಿಡಿ ಪ್ರಯೋಜನ ದೊರಕಿಸಿಕೊಡುವುದರ ಜೊತೆ ಸಾಲ ಮರು ಪಾವತಿಯನ್ನು ಖಾತ್ರಿಪಡಿಸಲು ಬೇಕಾದ ಮಧ್ಯಸ್ಥಿಕೆಯನ್ನು ಉತ್ಪಾದಕ ಕಂಪನಿಗಳು ತೆಗೆದುಕೊಂಡಲ್ಲಿ ಸಕಾಲದಲ್ಲಿ ರೈತರಿಗೆ ಆರ್ಥಿಕ ನೆರವು ಕಲ್ಪಿಸಿಕೊಡಲು ಸಾಧ್ಯವಾಗಲಿದೆ ಎಂದರು.

ಸಾನಿಧ್ಯ ವಹಿಸಿದ್ದ ವೇ. ಶರಣಯ್ಯ ಹಿರೇಮಠ ಆಶೀರ್ವಚನ ನೀಡಿದರು.

ಬಾಗಲಕೋಟೆಯ ಪ್ಯೂಚರ ಗ್ರೀನ್ಸ ಸಂಸ್ಥಾಪಕ ಬಿ.ಆರ್ ಅಥಣಿ, ಕೊರಟಗೆರೆ ಪರಿವರ್ತನಾ ಇಕೋ ರೈತ ಉತ್ಪಾದಕ ಕಂಪನಿಯ ಅಧ್ಯಕ್ಷ ಶಿವಕುಮಾರ, ಮೀನುಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕ ಶರಣಗೌಡ ಬಿರಾದಾರ, ಸೆಂಟ್ರಲ್ ಬ್ಯಾಂಕ್ ಆಫ್ ಇಂಡಿಯಾದ ವ್ಯವಸ್ಥಾಪಕ ಹರೀಶ.ಕೆ, ಪ್ರೋ ಅಗ್ರೋ ಬಯೋಟೆಕ್ ಎಂ.ಡಿ ಎಸ್.ಆರ್ ಜಾಧವ, ಸಮಾಜ ಸೇವಕಿ ಕಾಶೀಬಾಯಿ ರಾಂಪೂರ, ಬಿ.ಬಿ ಪಾಟೀಲ ಮತ್ತು ಕಂಪನಿಯ ಸಂಸ್ಥಾಪಕ ಅರವಿಂದ ಕೊಪ್ಪ ಮಾತನಾಡಿದರು.

ತಾಂತ್ರಿಕ ಗೋಷ್ಠಿಯಲ್ಲಿ ಸಿರಿಧಾನ್ಯ ಉತ್ಪಾದನೆ, ಮೌಲ್ಯವರ್ಧನೆ ಮತ್ತು ಮಾರಾಟ ಕುರಿತು ಸಿರಿವಾರ ಸಿರಿಧಾನ್ಯ ರೈತ ಉತ್ಪಾದಕ ಕಂಪನಿಯ ಸಿ.ಇ.ಓ ಶಿವಪ್ಪ ಮತ್ತು ಸುಸ್ಥಿರತೆಗಾಗಿ ಸಮಗ್ರ ಕೃಷಿ ಕುರಿತು ಪ್ರಗತಿಪರ ರೈತ ರಾಜೇಂದ್ರ ಬೋಸಲೆ ವಿಷಯ ಮಂಡಿಸಿ ಸಂವಾದ ನಡೆಸಿಕೊಟ್ಟರು.

ದಾಸೋಹಿ ರೈತ ಉತ್ಪಾದಕ ಕಂಪನಿಯ ನೂತನ ನಿರ್ದೇಶಕರಾಗಿ ಆಯ್ಕೆಯಾದ ಆನಂದ ದೇಸಾಯಿ(ಸೂಳಿಭಾವಿ), ಭಾಜಪಾ ಮಂಡಲ ಅಧ್ಯಕ್ಷ ಜಗದೀಶ ಪಂಪಣ್ಣವರ, ಸೋಮಲಿಂಗಪ್ಪ ಗಸ್ತಿಗಾರ, ಕಲ್ಲಣ್ಣ ಪ್ಯಾಟಿ, ಬಿ.ಜಿ ಮಠ, ಗೋಲಪ್ಪ ಗಂಗನಗೌಡ್ರ, ಶ್ರೀಶೈಲ ಮೇಟಿ, ಭೀಮಣ್ಣ ಮಳಗೌಡರ, ಬಸವರಾಜ ಕುಂಟೋಜಿ, ಸೋಮನಗೌಡ ಬಿರಾದಾರ, ಗುರಯ್ಯ ಮುದ್ನೂರಮಠ ಭಾಗಿಯಾಗಿದ್ದರು.

ವ್ಯವಸ್ಥಾಪಕ ನಿರ್ದೇಶಕಿ ರಶ್ಮಿ ಕೊಪ್ಪ ಸ್ವಾಗತಿಸಿದರು. ಶೇಖರಗೌಡ ಬಿರಾದಾರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಡಾ. ರಾಜಶೇಖರ ಹತ್ತರಸಂಗ ನಿರೂಪಿಸಿದರು. ಬಾಲಕೃಷ್ಣ ಗೌಡರ ವಂದಿಸಿದರು.

## ಮಕ್ಕಳು ಸಂಸ್ಕಾರವಂತರಾದಾಗ ಶಿಕ್ಷಣಕ್ಕೆ ಬೆಲೆ : ಶಾಸಕ ರಾಜುಗೌಡ

■ ಉದಯರಶ್ಮಿ ದಿನಪತ್ರಿಕೆ



ದೇವರಹಿಪ್ಪರಗಿ: ಮಕ್ಕಳು ಸಂಸ್ಕಾರವಂತರಾದಾಗ ಮಾತ್ರ ಅವರು ಕಲಿತ ಶಿಕ್ಷಣಕ್ಕೆ ಬೆಲೆಯಿದೆ ಎಂದು ಶಾಸಕ ರಾಜುಗೌಡ ಪಾಟೀಲ(ಕುದರಿ ಸಾಲವಾಡಗಿ) ಹೇಳಿದರು.

ಪಟ್ಟಣದಲ್ಲಿ ಶನಿವಾರ 2023–24ನೇ ಸಾಲಿನ ತಾಲ್ಲೂಕು ಪಂಚಾಯಿತಿ ಅನಿರ್ಬಂಧಿತ ಅನುದಾನ ಅಡಿಯಲ್ಲಿ ಸರ್ಕಾರಿ ಉರ್ದುಶಾಲೆಯ ಶೌಚಾಲಯ ನಿರ್ಮಾಣ ಕಾಮಗಾರಿ, ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಕ್ಕಳಿಗೆ ಮೊಟ್ಟೆ ವಿತರಣೆ ಹಾಗೂ ಸರ್ಕಾರಿ ಉರ್ದು ಪ್ರೌಢಶಾಲೆಯ ಕಂಪೌಂಡ ನಿರ್ಮಾಣ ಕಾಮಗಾರಿಗಳ ಚಾಲನೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕಾರ, ದೈಹಿಕಕ್ಷಮತೆ ಅಗತ್ಯವಾಗಿದೆ. ಶೈಕ್ಷಣಿಕ ಹಾಗೂ ಆರೋಗ್ಯದ ದೃಷ್ಟಿಯಿಂದ ಪಾಲಕರು ಮೊಬೈಲ್‌ಗಳಿಂದ ತಮ್ಮ ಮಕ್ಕಳನ್ನು ದೂರವಿಡಬೇಕು ಎಂದರು.

ಅಕ್ಷರದಾಸೋಹ ಯೋಜನೆಯ ಸಹಾಯಕ ನಿರ್ದೇಶಕ ಎ.ಎಸ್.ಡೋಣೂರ ಪ್ರಾಸ್ತಾವಿಕವಾಗಿ ಮಾತನಾಡಿ, ರಾಜ್ಯ ಸರ್ಕಾರದ ಅಕ್ಷರ ದಾಸೋಹ, ಮಧ್ಯಾಹ್ನ ಉಪಾಹಾರ ಯೋಜನೆಯಡಿ ಅಜೀಂ ಪ್ರೇಮ್‌ಜಿ ಫೌಂಡೇಷನ್ ಬೆಂಗಳೂರು ಇವರ ಸಹಭಾಗಿತ್ವದಲ್ಲಿ ಶಾಲಾ ಮಕ್ಕಳ ಪೌಷ್ಠಿಕತೆ ವೃದ್ಧಿಸಲು ಕೈಗೊಂಡ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಿದರು.

ಸಿಂದಗಿ ತಾಲ್ಲೂಕು ಕ್ಷೇತ್ರಶಿಕ್ಷಣಾಧಿಕಾರಿ ಎಂ.ಬಿ.ಯಡ್ರಾಮಿ ಸ್ವಾಗತಿಸಿದರು. ನಂತರ ಮಕ್ಕಳಿಗೆ ಮೊಟ್ಟೆ ವಿತರಿಸಲಾಯಿತು.

ಜಿಲ್ಲಾ ಜೆಡಿಎಸ್ ಉಪಾಧ್ಯಕ್ಷ ರಿಯಾಜ್ ತಾಂಬೋಳಿ, ಪಟ್ಟಣ ಪಂಚಾಯಿತಿ ಅಧ್ಯಕ್ಷೆ ಜಯಶ್ರೀ ದೇವಣಗಾಂವ, ಉಪಾಧ್ಯಕ್ಷ ರಮೇಶ ಮಸಬಿನಾಳ, ಮುಖ್ಯಾಧಿಕಾರಿ ಎಸ್. ಎಸ್.ಬಾಗಲಕೋಟ, ಜಿಲ್ಲಾ ಶಿಕ್ಷಕರ ಸಂಘದ ಅಧ್ಯಕ್ಷ ಜಿ. ಎಸ್.ಬೇವನೂರ, ತಾಲ್ಲೂಕು ಅಧ್ಯಕ್ಷ ಎ.ಎಚ್.ವಾಲಿಕಾರ, ಎಸ್‌ಡಿಎಮ್‌ಸಿ ಅಧ್ಯಕ್ಷ ಆರೀಫ್ ಕರ್ನಾಳ, ಮುಖ್ಯಶಿಕ್ಷಕ ಎಮ್.ಎ.ಹೆಬ್ಬಾಳ, ತಾಲ್ಲೂಕು ಕಸಾಪ ಅಧ್ಯಕ್ಷ ಜಿ.ಪಿ.ಬಿರಾದಾರ, ಪಟ್ಟಣ ಪಂಚಾಯಿತಿ ಸದಸ್ಯರಾದ ಕಾಸುಗೌಡ ಬಿರಾದಾರ(ಜಲಕತ್ತಿ), ಶಾಂತಯ್ಯ ಜಡಿಮಠ, ಕಾಶೀನಾಥ ಜಮಾದಾರ, ಕಾಶೀನಾಥ ಬಜಂತ್ರಿ, ಸುಮಂಗಲಾ ಸೆಬೇನವರ, ಸಿಂಧೂರ ಡಾಲೇರ, ಶಿಕ್ಷಕ ನಾಗೇಶ ನಾಗೂರ, ಮಹಿಬೂಬ್ ಮಳಖೇಡ ಹಾಗೂ ಶಿಕ್ಷಕ ಸಿಬ್ಬಂದಿ, ಮಕ್ಕಳು ಇದ್ದರು.

## ಭಗತ್ ಸಿಂಗ್ ಅವರ ಸಮಾಜವಾದಿ ಭಾರತ ಕಟ್ಟಲು ಸಂಕಲ್ಪ

ಕಲಬುರಗಿ: ಈ ದೇಶದಲ್ಲಿ ಸುಮಾರು 200 ವರ್ಷ ಆಳ್ವಿಕೆ ಮಾಡಿದ ಬ್ರಿಟಿಷರ ದಬ್ಬಾಳಿಕೆಯ ವಿರುದ್ಧ ಹೋರಾಡಿ ಅತ್ಯಂತ ಕಿರಿಯ ವಯಸ್ಸಿನಲ್ಲಿ ಗಲ್ಲುಗಂಬಕ್ಕೇರಿ ಹುತಾತ್ಮರಾಗಿ ಈ ದೇಶದ ವಿದ್ಯಾರ್ಥಿಗಳಿಗೆ ಯುವಜನರಿಗೆ ಸ್ಫೂರ್ತಿಯಾದರು ಭಗತ್ ಸಿಂಗ್ ಅವರು ಎಂದು ಆಲ್ ಇಂಡಿಯಾ ಡೆಮಾಕ್ರಟಿಕ್ ಸ್ಟೂಡೆಂಟ್ಸ್ ಆರ್ಗನೈಸೇಷನ್ (ಎಐ–ಡಿಎಓ) ಜಿಲ್ಲಾ ಕಾರ್ಯದರ್ಶಿ ತುಳಜರಾಮ ಎನ್.ಕೆ.ಹೇಳಿದರು.

ಮಹಾನ್ ಕ್ರಾಂತಿಕಾರಿ ಭಗತ್ ಸಿಂಗ್ ಅವರ ಜನ್ಮದಿನಾಚರಣೆ ಅಂಗವಾಗಿ ಶನಿವಾರ ಎಐಡಿಎಐ ಕಛೇರಿಯಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮಾನವನಿಂದ ಮಾನವ ಶೋಷಣೆ ಮುಕ್ತಿಗೊಳಿಸಿ ಸಮ–ಸಮಾನದ ಸಮಾಜವಾದಿ ಭಾರತ ಕಟ್ಟಬೇಕೆಂಬುವದು ಭಗತ್ ಸಿಂರ ಕನಸಾಗಿತ್ತು. ಆದರೆ ಇಂದಿಗೂ ಅವರ ಕನಸು ನನಸಾಗಿಲ್ಲ. ಅತ್ಯಂತ ಕೆಟ್ಟ ಪರಿಸ್ಥಿತಿಯಲ್ಲಿ ದೇಶವು ಸಾಗುತ್ತಿದೆ. ಶಿಕ್ಷಣವು ಖಾಸಗಿಕರಣಗೊಂಡು ಮಾರಾಟದ ವಸ್ತುವಾಗಿ ದುಡ್ಡಿದ್ದವರ ಸ್ವತ್ತಾಗುತ್ತಿದೆ. ನಮ್ಮನು ಆಳುತ್ತಿರುವ ಸರ್ಕಾರಗಳು ಜಾರಿಮಾಡುತ್ತಿರುವ ನೀತಿಗಳಿಂದಾಗಿ ಬಡ ರೈತ ಕಾರ್ಮಿಕರ ಮಕ್ಕಳು ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ.

ನಿರುದ್ಯೋಗ ಬಡತನ ಹಸಿವು ದೇಶದಾದ್ಯಂತ ತಾಂಡವಾಡುತ್ತಿದೆ. ಕೆಳ ಮತ್ತು ಮಧ್ಯಮ ವರ್ಗದ ಜನರು ಕನಿಷ್ಠ ಜೀವನ ನಡೆಸಲು ತತ್ತರಿಸುತ್ತಿದ್ದಾರೆ. ಚಿಕ್ಕ ಮಕ್ಕಳಿಂದ ಹಿಡಿದು ವಯೋವೃದ್ಧರ ಮೇಲೆ ಅತ್ಯಾಚಾರದ ಪ್ರಕರಣಗಖು ಹೆಚ್ಚುತ್ತಿವೆ. ಇಂತಹ ಸಂದರ್ಭದಲ್ಲಿ ವಿದ್ಯಾರ್ಥಿ ಯುವಜನರು ಅನ್ಯಾಯವನ್ನು ಪ್ರಶ್ನಿಸುತ್ತಿದ್ದ ಭಗತ್ ಸಿಂಗ್ ಅವರ ಆದ–'ರ್ಶಗಳನ್ನ ಮೈಗೂಡಿಸಿಕೊಂಡು ಇಂದಿನ ಸಮಸ್ಯೆಗಳ ವಿರುದ್ಧ

ಒಗ್ಗಟ್ಟಿನ ಹೋರಾಟ ಕಟ್ಟಲು ಮುನ್ನುಗ್ಗಬೇಕಿದೆ. ಆಗ ಮಾತ್ರ ನಾವು ಭಗತ್ ಸಿಂಗ್ ಅವರಿಗೆ ನೈಜ ಗೌರವ ಸಲ್ಲಿಸಿ ದಂತಾಗುತ್ತದೆ ಎಂದರು.ಜಿಲ್ಲೆಯಾದ್ಯಂತ ಸಾರ್ವಜನಿಕ ಸ್ಥಳಗಳಲ್ಲಿ, ಉದ್ಯಾನವನ ಶಾಲಾ– ಕಾಲೇಜುಗಳಲ್ಲಿ ಗೌರವಪೂರ್ವಕ ವಾಗಿ ಭಗತ್ ಸಿಂಗ್ ಅವರ ಜನ್ಮದಿನಾಚರಣೆಯನ್ನು ಆಚರಿಸಲಾಯಿತು.

## ಪರಮೇಶ್ವರ ಗದ್ಯಾಳ ಗೆ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ




■ ಉದಯರಶ್ಮಿ ದಿನಪತ್ರಿಕೆ

ತಿಕೋಟಾ: ಮಹಾರಾಷ್ಟ್ರದ ಗಡಿಯಂಚಿನ ತಾಲ್ಲೂಕಿನ ಘೋಣಸಗಿ ತಾಂಡಾ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಸೇವೆ ಸಲ್ಲಿಸುತ್ತಿರುವ ಶಿಕ್ಷಕ ಪರಮೇಶ್ವರ ಗದ್ಯಾಳ ಅವರು ಶೈಕ್ಷಣಿಕವಾಗಿ ಸಲ್ಲಿಸಿರುವ ಸೇವೆ ಪರಿಗಣಿಸಿ ಬೆಂಗಳೂರಿನ ಜನಸಿರಿ ಪೌಂಡೇಶನ ವತಿಯಿಂದ ಪುಟ್ಟಣ್ಣ ಚೆಟ್ಟಿ ಪುರಭವನ(ಬೆಂಗಳೂರ)ದಲ್ಲಿ ಶನಿವಾರ ನಡೆದ ರಾಜ್ಯ ಮಟ್ಟದ ಶಿಕ್ಷಕರ ಹಬ್ಬ 2024 ಸಮಾರಂಭದಲ್ಲಿ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ನೀಡಿ ಗೌರವಿಸಿದೆ.

ಶಾಲೆಯ ಸಮಗ್ರ ಅಭಿವೃದ್ಧಿಗಾಗಿ ಶ್ರಮಿಸಿ ಮಕ್ಕಳ ಸರ್ವತೋಮುಖ ಶೈಕ್ಷಣಿಕ ಕಾಳಜಿ ತೋರಿ ಸೇವೆ ಸಲ್ಲಿಸುತ್ತಿದ್ದಾರೆ. ಸ್ವಂತ ಹಣ ಖರ್ಚು ಮಾಡಿ ಶಾಲೆಯ ಅಂದ ಚಂದ ಹೆಚ್ಚಿಸಿ ಸಾರ್ವಜನಿಕರ ಹಾಗೂ ಇಲಾಖೆಗೆ ಪ್ರೀತಿ ಪಾತ್ರರಾಗಿದ್ದಾರೆ. ನೋಡುತ್ತಾ ಕಲಿ, ಆಡುತ್ತಾ ಕಲಿ ಎಂಬಂತೆ ಮಕ್ಕಳು ಕಲಿಯುವ ಕಲಿಕೆಗೆ ಸಹಾಯವಾಗಲು ನೈಜ ಕಲಿಕಾ ವಾತಾವರಣ ನಿರ್ಮಿಸಿದ್ದಾರೆ.

ಹಲವು ಸಾಧನೆಗಳ ಮೂಲಕ ಶಾಲೆಯಲ್ಲಿ ಉತ್ತಮ ಕಲಿಕಾ ವಾತಾವರಣ ನಿರ್ಮಿಸಿದ ಶಿಕ್ಷಕ ಪರಮೇಶ್ವರ ಗದ್ಯಾಳಗೆ ಈ ಬಾರಿ ಬೆಂಗಳೂರಿನ ಜನಸಿರಿ ಪೌಂಡೆಶನ ನೀಡುವ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪಡೆದಿದ್ದಕ್ಕಾಗಿ ಇಲಾಖೆಯ ಅಧಿಕಾರಿಗಳು, ಶಿಕ್ಷಕರು, ಮುದ್ದು ಮಕ್ಕಳು ಶುಭ ಹಾರೈಸಿದ್ದಾರೆ.

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಶೈಕ್ಷಣಿಕವಾಗಿ ಅಭಿವೃದ್ಧಿ ಮಾಡಿದ 131 ಅತ್ಯುತ್ತಮ ಶಿಕ್ಷಕರನ್ನು ಗುರ್ತಿಸಿ ಜನಸಿರಿ ತಂಡದ ಮುಖ್ಯಸ್ಥ ನಾಗಲೇಖ ಅವರು ಪ್ರಶಸ್ತಿ ಪ್ರದಾನ ಮಾಡಿದರು. ಇದೇ ಸಂದರ್ಭದಲ್ಲಿ ವಿಜಯಪುರ ಜಿಲ್ಲೆಯಿಂದ ಶಿಕ್ಷಕರಾದ ಸಂಗಮೇಶ ಜಂಗಮಶೆಟ್ಟಿ, ಈರಣ್ಣಾ ಹೊಸಟ್ಟಿ, ರೇಷ್ಮಾ ಪವಾರ ಸಚಿನ ತಳವಾರ ಪ್ರಶಸ್ತಿಗೆ ಭಾಜನರಾದರು.

# ಗ್ರಾಹಕರ ಹಿತ ಕಾಯುವುದೇ ಸಹಕಾರಿಯ ಆದ್ಯ ಕರ್ತವ್ಯ:ಅಣ್ಣಿಗೇರಿ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಸಜ್ಜನಸಿರಿ ಸೌಹಾರ್ದ ಸಹಕಾರಿಯ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ವಿವೇಕ ಸಜ್ಜನ ಹಾಗೂ ತಮ್ಮ ಪತಿಯ ಕಾರ್ಯಗಳನ್ನು ಪ್ರೋತ್ಸಾಹಿಸಿ ಬೆಂಬಲವಾಗಿ ನಿಂತ ಅವರ ಧರ್ಮಪತ್ನಿ ನಾಗವೇಣಿ ಸಜ್ಜನ ಅವರನ್ನು ಸ್ವಾಮಿ ವಿವೇಕಾನಂದ ಸೇನೆಯಿಂದ ಸನ್ಮಾನಿಸಲಾಯಿತು.

ಸನ್ಮಾನ ಸ್ವೀಕರಿಸಿ ಮಾತನಾಡಿದ ವಿವೇಕ ಸಜ್ಜನ ಅವರು, ಒಂದು ಸೌಹಾರ್ದವು ಪ್ರಗತಿ ಹೊಂದಬೇಕಾದರೆ ಪಾರದರ್ಶಕತೆ, ಪ್ರಾಮಾಣಿಕತೆ ಹಾಗೂ ನಿಷ್ಠೆಯಿಂದ ಕಾರ್ಯ ಮಾಡುವುದರ ಜೊತೆಗೆ ಆಡಳಿತ ಮಂಡಳಿಯ ಸದಸ್ಯರು ಹಾಗೂ ಷೇರುದಾರರ ಅಭಿಪ್ರಾಯವನ್ನು ಆಲಿಸಿ ಒಟ್ಟಾಗಿ ಮುನ್ನಡೆದಾಗ ಮಾತ್ರ ಪ್ರಗತಿ ಹೊಂದಲು ಸಾಧ್ಯ ಎಂದು ಹೇಳಿದರು. ಸಿದ್ದಸಿರಿ ಸೌಹಾರ್ದ ಸಹಕಾರಿಯ ಜಂಟಿ ವ್ಯವಸ್ಥಾಪಕ ನಿರ್ದೇಶಕ ರಾಘವ್ ಅಣ್ಣಿಗೇರಿ ಮಾತನಾಡಿ, ರಾಜ್ಯದಲ್ಲಿ 6500 ವಿವಿಧ ಸೌಹಾರ್ದ ಸಹಕಾರಿಗಳು ಕಾರ್ಯನಿರ್ವಹಿಸುತ್ತಿದ್ದು, ಜನತೆಯ ವಿಶ್ವಾಸ ಗಳಿಸುವುದರೊಂದಿಗೆ ಗ್ರಾಹಕ ಸ್ನೇಹಿಯಾಗಿ ಸೇವೆ ಸಲ್ಲಿಸುತ್ತಿರುವುದು ಶ್ಲಾಘನೀಯ. ಅನೇಕ ರಾಷ್ಟ್ರೀಕೃತ, ಖಾಸಗಿ ಬ್ಯಾಂಕುಗಳ ಮಧ್ಯದಲ್ಲಿಯೂ ಕೂಡ ಜನತೆ ಸೌಹಾರ್ದ ಸಹಕಾರಿಗಳಲ್ಲಿ ಹೆಚ್ಚಿನ ವ್ಯವಹಾರಗಳನ್ನು ಮಾಡುತ್ತಿದ್ದು ಸಹಕಾರಿಗಳ ಜವಾಬ್ದಾರಿಯನ್ನು ಇನ್ನಷ್ಟು ಹೆಚ್ಚಿಸಿದೆ. ಜನತೆಯ ವಿಶ್ವಾಸಕ್ಕೆ ತಕ್ಕಂತೆ ಕಾರ್ಯನಿರ್ವಹಿಸುವ ಜವಾಬ್ದಾರಿ ಎಲ್ಲ ಸಹಕಾರಿಗಳ ಮೇಲಿದೆ ಎಂದರು.

ಈ ಸಂದರ್ಭದಲ್ಲಿ ಸಿದ್ದಸಿರಿ ಸೌಹಾರ್ದ ಸಹಕಾರಿಯ ಜನರಲ್ ಮ್ಯಾನೇಜರ ದೇವಿ ಹಿರೇಮಠ, ವಲಯ ಅಧಿಕಾರಿ ಈಶ್ವರ ಮುಂಜಣ್ಣಿ, ವ್ಯಾಪಾರಸ್ಥರಾದ ಮಂಜುನಾಥ ಹಿರೇಮಠ, ನಾಗವೇಣಿ ಸಜ್ಜನ, ರಚನಾ ಅಣ್ಣಿಗೇರಿ ಉಪಸ್ಥಿತರಿದ್ದರು.

# ಸಾಹಿತ್ಯ ಸಮ್ಮೇಳನ ಯಶಸ್ಸಿಗೆ ಕೈಜೋಡಿಸಿ :ಕಾಮರಾಜ

■ ಉದಯರಶ್ಮಿ ದಿನಪತ್ರಿಕೆ



ಮುದ್ದೇಬಿಹಾಳ: ತಾಳಿಕೋಟೆ ತಾಲೂಕು ಆದ ಬಳಿಕ ನಡೆಯುತ್ತಿರುವ ಪ್ರಥಮ ತಾಳಿಕೋಟೆ ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಎಲ್ಲ ಸಾಹಿತಿಗಳು, ಕನ್ನಡಾಭಿಮಾನಿಗಳು ಭಾಗಿಯಾಗಿ ಕನ್ನಡದ ತೇರನ್ನು ಎಳೆಯುವ ಮೂಲಕ ಸಮ್ಮೇಳನವನ್ನು ಯಶಸ್ವಿಗೊಳಿಸೋಣ ಎಂದು ಕಸಾಪ ಅಧ್ಯಕ್ಷ ಕಾಮರಾಜ ಬಿರಾದಾರ ಹೇಳಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಈ ಕುರಿತು ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಅ.1 ರಂದು ಸಮ್ಮೇಳನ ನಿಗದಿಯಾಗಿದ್ದು ಅಂದು ಬೆಳಿಗ್ಗೆ ಸಮ್ಮೇಳನಕ್ಕೆ ತೆರಳಲು ಮತ್ತು ಸಂಜೆ ಅಲ್ಲಿಂದ ಮರಳಲು ಬಸ್ ವ್ಯವಸ್ಥೆ ಕಲ್ಪಿಸುವಂತೆ ಸಾರಿಗೆ ಘಟಕ ವ್ಯವಸ್ಥಾಪಕರಿಗೆ ಮನವಿ ಮಾಡಿಕೊಳ್ಳೋಣ. ನಮ್ಮ ತಾಲೂಕಿನ ಶಿಕ್ಷಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾದಲ್ಲಿ ಸಮ್ಮೇಳನ ಯಶಸ್ವಿ ಸಾಧ್ಯತೆ ಹೆಚ್ಚಿರುವದರಿಂದ ಶಾಲೆಗಳಿಗೆ ರಜೆ ಕೊಡಿಸುವ ಪ್ರಯತ್ನ ಮಾಡುವೆ ಎಂದರು. ಸಾಹಿತಿಗಳಾದ ಅಶೋಕ ಮಣಿ, ಪಿ.ಎಚ್. ಉಪ್ಪಲದಿನ್ನಿ, ಶಿವಕುಮಾರ ಹಡಪದ, ಪ್ರಭುಗೌಡ ರಾಯರೆಡ್ಡಿ, ಬಿ.ವಿ.ಕೋರಿ, ಎಂ.ಬಿ.ಪಾಟೀಲ ಮತ್ತಿತರರು ಮಾತನಾಡಿ ಸಲಹೆ ಸೂಚನೆಗಳನ್ನು ನೀಡಿದರು.ಈ ವೇಳೆ ಎಪಿಎಂಸಿ ನಿರ್ದೇಶಕ ವಾಯ್. ಎಚ್.ವಿಜಯಕರ, ಅಕ್ಷರ ದಾಸೋಹದ ಸಹಾಯಕ ನಿರ್ದೇಶಕ ಎಂ.ಎಂ.ಬೆಳಗಲ್ಲ, ಜಯ ಕರ್ನಾಟಕ ಸಂಘಟನೆಯ ಅಧ್ಯಕ್ಷ ರಾಜುಗೌಡ ತುಂಬಗಿ, ರಹೆಮಾನ ಬಿದರಕುಂದಿ, ಪರಶುರಾಮ ಚೌಡಕೇರ, ಟಿ.ಭಾಸ್ಕರ, ಹುಸೇನ ಮುಲ್ಲಾ, ಸದಾಶಿವ ಮಠ, ಅಮರೇಶ ಗೂಳಿ, ಹುಸೇನ ಕಾಳಗಿ, ಸಂಗಣ್ಣ ಮೇಲಿನಮನಿ, ಸೋಮು ಮೇಟಿ, ಸಿದ್ದು ಹಡಲಗೇರಿ ಸೇರಿದಂತೆ ಮತ್ತಿತರರು ಇದ್ದರು.

ಸಮ್ಮೇಳನಕ್ಕೆ ಮುದ್ದೇಬಿಹಾಳ ತಾಲೂಕಿನ ಸಾಹಿತಿಗಳಿಗೆ, ಕನ್ನಡಾಭಿಮಾನಿಗಳಿಗೆ ಆವ್ಹಾನಿಸದಿರುವದು ಹಲವು ಸಾಹಿತಿಗಳ ಪತ್ರಕರ್ತರ ಅಸಮಾಧಾನಕ್ಕೆ ಕಾರಣವಾಗಿತ್ತು. ಪತ್ರಿಕಾಗೋಷ್ಠಿಯಲ್ಲಿ ಈ ಬಗ್ಗೆ ಕಾವೇರಿದ ಚರ್ಚೆಗಳು ನಡೆದವು. ಹಲವು ಸಾಹಿತಿಗಳು ಮತ್ತು ಪತ್ರಕರ್ತರು ನೇರವಾಗಿ ತಾಳೀಕೋಟೆ ಕಸಾಪ ಅಧ್ಯಕ್ಷರಿಗೆ ಮತ್ತು ಜಿಲ್ಲಾ ಅಧ್ಯಕ್ಷ ಹಾಸಿಂಪೀರ ವಾಲಿಕಾರ ಅವರಿಗೆ ಇನ್ನೊಮ್ಮೆ ಈ ರೀತಿಯಾಗದಂತೆ ನೋಡಿಕೊಳ್ಳುವಂತೆ ಎಚ್ಚರಿಕೆ ಸಂದೇಶ ರವಾಸಿದರೆ, ಇನ್ನೂ ಕೆಲವರು ಕನ್ನಡದ ತೇರನ್ನು ಎಳೆಯುವ ಉದ್ದೇಶದಿಂದ ಆಗಿರುವ ತಪ್ಪನ್ನು ಮನ್ನಿಸಿ ಸಮ್ಮೇಳನದಲ್ಲಿ ಭಾಗಿಯಾಗೋಣ ಎನ್ನುವ ಮಾತುಗಳನ್ನಾಡಿದರು.

# ಮೊಟ್ಟೆಗಾಗಿ ಪ್ರತಿಭಟಿಸಿದ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳು

■ ಉದಯರಶ್ಮಿ ದಿನಪತ್ರಿಕೆ.



ಮುದ್ದೇಬಿಹಾಳ: ಮೊಟ್ಟೆ ಕೊಟ್ಟಿಲ್ಲ ಅಂತ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳು ಶಾಲಾ ಆವರಣದಲ್ಲಿ ಪ್ರತಿಭಟನೆ ನಡೆಸಿದ ಘಟನೆ ಸೋಮುವಾರ ತಾಲೂಕಿನ ಗುಡಿಹಾಳ ಗ್ರಾಮದಲ್ಲಿ ನಡೆದಿದೆ.

ಪ್ರಭಾರ ಮುಖ್ಯ ಶಿಕ್ಷಕನ ವಿರುದ್ಧ ಆರೋಪಗಳ ಸುರಿಮಳೆಗೈದ ವಿದ್ಯಾರ್ಥಿಗಳು, ಶಾಲೆಗೆ ನಿಗದಿತ ಅವಧಿಯಲ್ಲಿ ಬರುವದಿಲ್ಲ ಎಂಬ ಗಂಭೀರ ಆರೋಪ ಮಾಡಿದ್ದಾರೆ. ಮಧ್ಯಾಹ್ನ 12ಗಂಟೆಗೆ ಬಂದು 3 ಗಂಟೆಗೆ ತೆರಳುತ್ತಾರೆ. ಕೇಳಿದರೆ ಮೀಟಿಂಗ್ ಅಂತಾ ಸುಳ್ಳು ಹೇಳುತ್ತಾರೆ. ಅಲ್ಲದೇ ಅತಿಥಿ ಶಿಕ್ಷಕರಿಗೆ ಹೆದರಿಸುತ್ತಾರೆ. ಸರಿಯಾಗಿ ಮೊಟ್ಟೆ ಕೊಡುವದಿಲ್ಲ. ಬಹಳ ಕೇಳಿದರೆ ಮೊಟ್ಟೆ ಬದಲಾಗಿ ಶೇಂಗಾ ಚಿಕ್ಕಿ ಕೊಡುತ್ತಾರೆ ಎಂದೆಲ್ಲ ಆರೋಪಿಸಿದರು. ವಿದ್ಯಾರ್ಥಿಗಳ ದೂರಿನ ಹಿನ್ನೆಲೆ ಪಾಲಕರು ಶಾಲೆಗೆ ಪ್ರಭಾರ ಮುಖ್ಯ ಶಿಕ್ಷಕನನ್ನು ತರಾಟೆಗೆ ತೆಗೆದುಕೊಂಡರು. ಈ ಶಾಲೆ ನಮಗೆ ಬೇಡವೇ ಬೇಡ, ಮುಚ್ಚಿ ಬಿಡೋಣ ಎಂದು ತಮ್ಮ ಆಕ್ರೋಶವನ್ನು ಹೊರಹಾಕಿದರು.

ಈ ಬಗ್ಗೆ ಶಾಲೆಯ ಎಸ್‌ಡಿ-ಎಂಸಿ ಅಧ್ಯಕ್ಷ ಶಾಂತಗೌಡ ಮಾಗಿ ಮಾತನಾಡಿ, ವಿದ್ಯಾರ್ಥಿಗಳಿಗೆ ಮೊಟ್ಟೆ ನೀಡಿಲ್ಲ ಎಂಬ ಬಗ್ಗೆ ಹಲವು ಬಾರಿ ದೂರುಗಳು ಬಂದಿದ್ದು ಕೊಡುವಂತೆ ಪ್ರಭಾರ ಮುಖ್ಯಗುರು ಸಂಗಮೇಶ ಶಾಂತಪ್ಪ ನವಲಿ ಅವರಿಗೆ ತಿಳಿಸಿದರೆ, ಕೊಡೋಣ ತೊಗೋರಿ ಎನ್ನುವ ಹಾರಿಕೆ ಉತ್ತರ ನೀಡುತ್ತಾರೆ. ಶಾಲೆಯ ಕೆಲವು ಚಟುವಟಿಕೆಗಳನ್ನು ನಮ್ಮ ಗಮನಕ್ಕೆ ತರದೇ ನಡೆಸುತ್ತಾರೆ. ಶಿಕ್ಷಣಾಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

# ಬಾಬಾನಗರ ಗ್ರಾಮದಲ್ಲಿ ಸ್ವಚ್ಛತೆಯೆಡೆಗೆ ದಿಟ್ಟ ಹೆಜ್ಜೆ ಅಭಿಯಾನ ಆಯೋಜನೆ

# ಬೂದು ನೀರು ನಿರ್ವಹಣೆ ಅತ್ಯವಶ್ಯ ಕಾರ್ಯ: ಪಿಡಿಓ ರೇಣುಕಾ

■ ಉದಯರಶ್ಮಿ ದಿನಪತ್ರಿಕೆ



ತಿಕೋಟಾ: ತಾಲೂಕು ವ್ಯಾಪ್ತಿಯ ಬಾಬಾನಗರ ಗ್ರಾಮದಲ್ಲಿ ತಾಲೂಕು ಪಂಚಾಯತಿ ತಿಕೋಟಾ ಹಾಗೂ ಗ್ರಾಮ ಪಂಚಾಯತಿ ಬಾಬಾನಗರ ಅವರ ವತಿಯಿಂದ ಮಹಾತ್ಮ ಗಾಂಧಿ ನರೇಗಾ ಯೋಜನೆಯ ಐಇಸಿ ಕಾರ್ಯಕ್ರಮದಡಿ ಹಮ್ಮಿಕೊಂಡ ಸ್ವಚ್ಛತೆಯೆಡೆಗೆ ದಿಟ್ಟ ಹೆಜ್ಜೆ ಅಭಿಯಾನಕ್ಕೆ ಚಾಲನೆ ನೀಡಲಾಯಿತು.

ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಪಂಚಾಯತಿ ಅಭಿವೃದ್ಧಿ ಅಧಿಕಾರಿ ರೇಣುಕಾ ಸೋಲಾಪುರ ರವರು, ಸೆ.14 ರಿಂದ ನಮ್ಮ ಬಾಬಾನಗರ ಗ್ರಾಮ ಪಂಚಾಯತಿ ವತಿಯಿಂದ ಸ್ವಚ್ಛತೆಯೆಡೆಗೆ ದಿಟ್ಟ ಹೆಜ್ಜೆ ಅಭಿಯಾನ ವನ್ನು ಹಮ್ಮಿಕೊಳ್ಳಲಾಗಿದೆ. ಈ ಅಭಿಯಾನದ ಭಾಗವಾಗಿ ಇಂದು ನಮ್ಮ ಗ್ರಾಮದ ವಿವಿಧ ಸರಕಾರಿ ಶಾಲೆ ಮಕ್ಕಳಿಂದ ಜಾಥಾ ಆಯೋಜನೆ ಮಾಡಲಾಗಿದೆ. ಅದರ ಜೊತೆಗೆ ಗ್ರಾಮದ ಯಲ್ಲಮ್ಮ ದೇವಿ ದೇವಸ್ಥಾನದ ಪಕ್ಕ ಮನರೇಗಾ ಯೋಜನೆಯಡಿ ಅಭಿವೃದ್ಧಿಪಡಿಸಲಾದ ಕಲ್ಯಾಣಿ ಹತ್ತಿರ ಶ್ರಮದಾನ ಮಾಡುವ ಮೂಲಕ ಈ ಅಭಿಯಾನದ ಮುಖ್ಯ ಉದ್ದೇಶವಾದ ಬೂದು ನೀರು ನಿರ್ವಹಣೆ ಕುರಿತು ಜನ ಜಾಗೃತ್ತಿ ಮೂಡಿಸುವ ಕಾರ್ಯ ಮಾಡುತ್ತಿದ್ದೇವೆ ಎಂದರು.

ಬೂದು ನೀರು ನಿರ್ವಹಣೆಯು ಪ್ರಸ್ತುತ ದಿನಮಾನದಲ್ಲಿ ಅತೀ ಅವಶ್ಯಕವಾದ ಪ್ರಥ-ಮಾಧ್ಯತೆಯ ಕಾರ್ಯವಾಗಿದೆ. ಬೂದು ನೀರು ನಿರ್ವಹಣೆಯಿಂದ ನಮಗೆ ಸಾಕಷ್ಟು ಅನುಕೂಲಗಳಿವೆ ಎಂದರು.

ತಾಲೂಕು ಐಇಸಿ ಸಂಯೋಜಕ ಕಲ್ಲಪ್ಪ ನಂದರಗಿ ಮಾತನಾಡಿ, ಈ ಅಭಿಯಾನದ ಪ್ರಯುಕ್ತ ಸ್ವ-ಸಹಾಯ ಸಂಘದವರು, ನಾಗರಿಕ ಸೇವಾ ಸಂಘ, ಸಮುದಾಯ ಸಂಘಟನೆಗಳು, ಶಾಲಾ ಕಾಲೇಜಿನ ವಿದ್ಯಾರ್ಥಿಗಳ, ಗ್ರಾಮಸ್ಥರ ಸಹಯೋಗದಲ್ಲಿ ಮನರೇಗಾ ಯೋಜನೆಯಡಿ ಅನುಷ್ಠಾನ ಮಾಡಲಾದ ಜಲಸಂರಕ್ಷಣೆ ಕಾಮಗಾರಿಗಳಲ್ಲಿ ಶ್ರಮದಾನ ಮಾಡಿ ಸ್ವಚ್ಛಗೊಳಿಸಲಾಗಿದೆ. ಅದರಂತೆ ಇಂದು ಬಾಬಾನಗರ ಗ್ರಾಮದ ಕಲ್ಯಾಣಿ ಸ್ಥಳದಲ್ಲಿ ಶ್ರಮದಾನ ಮಾಡುವ ಮೂಲಕ ಜಲ ಸಂರಕ್ಷಣೆಯ ಕಾಮಗಾರಿಯ ಸ್ವಚ್ಛತೆಯ ಮಹತ್ವದ ಕುರಿತು ಸಮುದಾಯಕ್ಕೆ ಜಾಗೃತಿ ಮೂಡಿಸುವ ಕಾರ್ಯ ಮಾಡಿದ್ದೇವೆ ಎಂದರು.

ಗ್ರಾಮೀಣ ಭಾಗದಲ್ಲಿ ಉತ್ತಮ ಆರೋಗ್ಯ, ಉತ್ತಮ ಪರಿಸರ ಹಾಗೂ ಉತ್ತಮ ಸಮಾಜ ನಿರ್ಮಾಣ ಮಾಡುವ ಉದ್ದೇಶದಿಂದ ಸರ್ಕಾರ ಈಗಾಗಲೇ ಗ್ರಾಮೀಣ ಪ್ರದೇಶಗಳಲ್ಲಿ ಅನೇಕ ಯೋಜನೆಗಳನ್ನು ಜಾರಿಗೆ ತಂದಿದೆ. ಜನರು ಬಚ್ಚಲು ನೀರು, ಬಟ್ಟೆಗಳನ್ನು ತೊಳೆದ ನೀರು ಹಾಗೂ ಪಾತ್ರೆಗಳನ್ನು ತೊಳೆದ ನೀರನ್ನು ರಸ್ತೆಗಳಿಗೆ ಬಿಡುವದರಿಂದ ಅವು ಅಲ್ಲಿಯೇ ನಿಂತು ಸಾಂಕ್ರಾಮಿಕ ರೋಗಗಳ ಹೆಚ್ಚಳಕ್ಕೆ ಆಹಾರವಾಗುತ್ತಿತ್ತು. ಪ್ರಸ್ತುತ ಮನರೇಗಾ ಯೋಜನೆಯಡಿ ಬಚ್ಚಲು ಗುಂಡಿ ನಿರ್ಮಿಸಲು ಅವಕಾಶ ನೀಡಲಾಗಿದ್ದು, ಗ್ರಾಮಸ್ಥರು ಅದರ ಉಪಯೋಗ ಪಡೆದುಕೊಳ್ಳುವದರ ಮೂಲಕ ಗ್ರಾಮ ನೈರ್ಮಲ್ಯಕ್ಕೆ ಕಾರಣರಾಗಬೇಕು ಎಂದರು.

ಈ ಸಂದರ್ಭದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ರೇಣುಕಾ ಸೋಲಾಪುರ, ತಾಂತ್ರಿಕ ಸಂಯೋಜಕ ನಾಗರಾಜ ಕಲಕೇರಿ, ತಾಲೂಕು ಐಇಸಿ ಸಂಯೋಜಕ ಕಲ್ಲಪ್ಪ ನಂದರಗಿ, ಗ್ರಾಮ ಪಂಚಾಯತಿ ಸದಸ್ಯರಾದ ಸಿದ್ಧಗೊಂಡ ರುದ್ರಗೌಡರ, ಪ್ರಕಾಶ ಆಯತವಾಡ, ರಾಜು ಪೂಜಾರಿ, ಕಾರ್ಯದರ್ಶಿ ಸಿ.ಬಿ.ಕೊಲಕಾರ, ಟಿಎಇ ಶ್ರೀಧರ ಸಾವಳಗಿ, ಗ್ರಾಮ ಕಾಯಕ ಮಿತ್ರ ಈರಮ್ಮ ಭೊಮ್ಮನಹಳ್ಳಿ, ಗ್ರಾಮ ಪಂಚಾಯತಿ ಸಿಬ್ಬಂದಿಗಳಾದ ಲಕ್ಷ್ಮಪ್ಪ ತಳವಾರ, ಪ್ರಕಾಶ ವಾಲಿಕಾರ, ರಾಕೇಶ ಸಾವಳಗಿ, ಸಂಜು ಕುಸನಾಳ ಸೇರಿದಂತೆ ಶಾಲಾ ಶಿಕ್ಷಕರು, ಆಶಾ-ಅಂಗನವಾಡಿ ಕಾರ್ಯಕರ್ತೆಯರು, ಸ್ವ-ಸಹಾಯ ಸಂಘದ ಸದಸ್ಯರು, ಚುನಾಯಿತ ಜನಪ್ರತಿನಿಧಿಗಳು, ಶಾಲಾ ಮಕ್ಕಳು ಸೇರಿ ಇತರರು ಹಾಜರಿದ್ದರು.

ಅಭಿಯಾನದ ಭಾಗವಾಗಿ ಗ್ರಾಮದ ಸರಕಾರಿ ಕನ್ನಡ ಗಂಡು ಮಕ್ಕಳ ಶಾಲೆ, ಸರಕಾರಿ ಕನ್ನಡ ಹೆಣ್ಣು ಮಕ್ಕಳ ಶಾಲೆ, ಸರಕಾರಿ ಉರ್ದು ಪ್ರಾಥಮಿಕ ಶಾಲೆ ಮಕ್ಕಳಿಂದ ಗ್ರಾಮ ಪ್ರಮುಖ ಬೀದಿಯಲ್ಲಿ ಜಾಗೃತಿ ಜಾಥಾ ಹಮ್ಮಿಕೊಳ್ಳಲಾಯಿತು. ಜಾಥಾಯುದ್ದಕ್ಕೂ ಮಕ್ಕಳು ಆರೋಗ್ಯ & ಸ್ವಚ್ಛತೆಯ ಕುರಿತಾದ ಘೋಷಣೆಗಳನ್ನು ಕೂಗುತ್ತಾ ಜಾಗೃತಿ ಮೂಡಿಸಿದರು.

ನಂತರ ಗ್ರಾಮದ ಯಲ್ಲಮ್ಮದೇವಿ ದೇವಸ್ಥಾನದ ಪಕ್ಕದಲ್ಲಿ ಮನರೇಗಾ ಯೋಜನೆಯಡಿ ನಿರ್ಮಿಸಿದ ಕಲ್ಯಾಣಿ ಪಕ್ಕದಲ್ಲಿ ಶ್ರಮದಾನ ಕೈಗೊಳ್ಳಲಾಯಿತು.

# ಬಾವಿಗೆ ಬಿದ್ದ ಹಸು ರಕ್ಷಿಸಿದ ಅಗ್ನಿಶಾಮಕ ಸಿಬ್ಬಂದಿ

■ ಉದಯರಶ್ಮಿ ದಿನಪತ್ರಿಕೆ



ಮುದ್ದೇಬಿಹಾಳ: ತಾಲೂಕಿನ ಚೊಂಡಿ ಗ್ರಾಮದ ಬಾವಿಯೊಂದರಲ್ಲಿ ಬಿದ್ದಿದ್ದ ಹಸುವನ್ನು ರಕ್ಷಿಸುವಲ್ಲಿ ರವಿವಾರ ಅಗ್ನಿಶಾಮಕ ಸಿಬ್ಬಂದಿ ಸಫಲರಾಗಿದ್ದಾರೆ.

ಕಾಸೀಮಸಾಬ ಎಂಬುವರಿಗೆ ಸೇರಿದ್ದ ಜಮೀನಿನ ಸುಮಾರು 50 ಅಡಿ ಆಳವಿರುವ ಭಾವಿಯಲ್ಲಿ ಹಸು ಬಿದ್ದಿದೆ. ಅದನ್ನು ಕಂಡ ಹಲವರು ಅಗ್ನಿಶಾಮಕ ಸಿಬ್ಬಂದಿಗೆ ಕರೆ ಮಾಡಿ ತಿಳಿಸಿದ್ದಾರೆ. ಅಗ್ನಿಶಾಮಕ ಸಿಬ್ಬಂದಿಗಳಾದ ಸುಭಾಷ ರಾಠೋಡ, ಸಿದ್ದಣ್ಣ ಪೋಲೇಶಿ, ಸಂತೋಷ ಲಮಾಣಿ, ಮಹೇಶ ಕರಡ್ಡಿ, ಪ್ರಕಾಶ ಸುಬ್ಬನಗೋಳ, ಶಕೀಲ ಅವಟಿ, ಮಂಜುನಾಥ ಬಳಿಗಾರ, ರವೀಂದ್ರ ರತ್ನಾಕರ ಮತ್ತು 112 ಸಿಬ್ಬಂದಿ ಸಿಕಂದರ ಮಸಳಿ ಮತ್ತು ಯಲ್ಲಪ್ಪ ಭಜಂತ್ರಿ ಗ್ರಾಮಸ್ಥರ ಸಹಾಯದಿಂದ ಸೂಕ್ತ ಕಾರ್ಯಾಚರಣೆ ನಡೆಸಿ ಹಸುವನ್ನು ಸುರಕ್ಷಿತವಾಗಿ ಮೇಲಕ್ಕೆತ್ತಿ ರಕ್ಷಿಸಿದ್ದಾರೆ. ಇವರ ಕಾರ್ಯಕ್ಕೆ ಗ್ರಾಮಸ್ಥರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

# ಡಾ.ಹಾದಿಮನಿ ಸಾಮಾಜಿಕ ಕಳಕಳಿ ಶ್ಲಾಘನೀಯ :ಶಾಸಕ ಮನಗೂಳಿ


■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಇತ್ತೀಚೆಗೆ ಆಹಾರ ಪದ್ಧತಿಯಲ್ಲಿನ ಬದಲಾವಣೆಯಿಂದಾಗಿ ಜನರಲ್ಲಿ ರಕ್ತದೊತ್ತಡ, ಸಕ್ಕರೆ ಖಾಯಿಲೆ, ಹೃದಯ ಸಂಬಂಧಿಸಿದ ಖಾಯಿಲೆ ಸೇರಿದಂತೆ ಅನೇಕ ರೋಗಗಳು ಸಾಮಾನ್ಯವಾಗಿವೆ ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ಸಿಂದಗಿ ಮತಕ್ಷೇತ್ರದ ಆಲಮೇಲ ಪಟ್ಟಣದಲ್ಲಿ ಡಾ.ಸಮೀರ ಹಾದಿಮನಿ ಹಾಗೂ ಸಮಾನ ಮನಸ್ಕರ ಬಳಗದ ವತಿಯಿಂದ ಹಮ್ಮಿಕೊಂಡ ಬೃಹತ್ ಉಚಿತ ಆರೋಗ್ಯ ತಪಾಸಣೆ ಮತ್ತು ಚಿಕಿತ್ಸಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಹಲವು ವರ್ಷಗಳಿಂದ ಹಾದಿಮನಿ ಆಸ್ಪತ್ರೆಯು ಗ್ರಾಮೀಣ ಪ್ರದೇಶದ ಬಡ ರೋಗಿಗಳಿಗಾಗಿ ಉಚಿತ ಆರೋಗ್ಯ ಶಿಬಿರ ಏರ್ಪಡಿಸುವ ಮೂಲಕ ಆರೋಗ್ಯ ಜಾಗೃತಿ ಮತ್ತು ರೋಗಿಗಳ ಆರ್ಥಿಕ ಹೊರೆ ತಗ್ಗಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿದೆ. ಹಾದಿಮನಿ ಆಸ್ಪತ್ರೆಯ ವೈದ್ಯ ಡಾ.ಸಮೀರ ಹಾದಿಮನಿ ಇವರ ಸಾಮಾಜಿಕ ಕಳಕಳಿ ಹಾಗೂ ಇವರ ನಿಸ್ವಾರ್ಥ ಸೇವಾಕಾರ್ಯ ಶ್ಲಾಘನೀಯ ಎಂದರು. ಈ ವೇಳೆ ವಿಜಯಪುರದ ನೇತ್ರ ತಜ್ಞ ಡಾ.ಬಸವರಾಜ್ ಝುಳಕಿ, ಮೂತ್ರಪಿಂಡ ತಜ್ಞ ಡಾ. ಸಂದೀಪ ಪಾಟೀಲ್, ಎಲುಬು-ಕೀಲು ತಜ್ಞ ಡಾ. ಪ್ರೀತಿಶ್ ಯಂಡಿಗೇರೆ ಮಾತನಾಡಿ, ಜನರು ತಮ್ಮ ಆರೋಗ್ಯದ ಕುರಿತು ನಿರ್ಲಕ್ಷ್ಯ ತೋರದೆ ತಜ್ಞ ವೈದ್ಯರು ಇಂತಹ ಉಚಿತ ಆರೋಗ್ಯ ಶಿಬಿರಗಳನ್ನು ಹಮ್ಮಿಕೊಂಡಾಗ ಶಿಬಿರದಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡಿಸಿಕೊಂಡು ಆರೋಗ್ಯದ ಕುರಿತು ವಿಶೇಷ ಕಾಳಜಿ ವಹಿಸಬೇಕು ಎಂದರು ಹೇಳಿದರು. ಇದೇ ಸಂದರ್ಭದಲ್ಲಿ ಡಾ.ಸಮೀರ ಹಾದಿಮನಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಬೃಹತ್ ಉಚಿತ ಆರೋಗ್ಯ ತಪಾಸಣೆ ಮತ್ತು ಚಿಕಿತ್ಸಾ ಶಿಬಿರದಲ್ಲಿ ತಾಲೂಕಿನ ವಿವಿಧ ಹಳ್ಳಿಯ 500ಕ್ಕೂ ಅಧಿಕ ರೋಗಿಗಳು ಭಾಗವಹಿಸಿ, ರಕ್ತ, ಮೂತ್ರ ತಪಾಸಣೆ ಸಂಧಿವಾತ, ಸ್ನಾಯು ಸೆಳೆತ, ಮೂಳೆ ಮುರಿತ, ಎಲುಬು-ಕೀಲುಗಳ ಸಮಸ್ಯೆ, ಅಂಧತ್ವ, ಕಣ್ಣಿನ ಪೊರೆ, ಬಿಪಿ, ಮಧುಮೇಹ (ಶುಗರ್), ಕಿಡ್ನಿ ಸ್ಟೋನ್ಸ್ (ಹರಳುಗಳು), ಮೂತ್ರಕೋಶದ ಸೋಂಕು, ಕಿಡ್ನಿ ವೈಫಲ್ಯ, ಉರಿ ಮೂತ್ರ ಸೇರಿದಂತೆ ಮುಂತಾದ ಸಮಸ್ಯೆಗಳ ತಪಾಸಣೆ ಮಾಡಿಸಿಕೊಂಡು ಶಿಬಿರದ ಸದುಪಯೋಗ ಪಡೆದುಕೊಂಡರು. ಇದೇ ವೇಳೆ ಡಾ.ಬಸವರಾಜ್ ಝುಳಕಿ, ಡಾ.ಸಂದೀಪ್ ಪಾಟೀಲ್, ಪ್ರೀತಿಶ್ ಯಂಡಿಗೇರೆ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಪಟ್ಟಣ ಪಂಚಾಯತ ಅಧ್ಯಕ್ಷ ಸಾದೀಕ್ ಸುಂಬಡ, ಡಾ.ಜುನೇರಾ ಹಾದಿಮನಿ, ಸಮಾನ ಮನಸ್ಕರ ಬಳಗದ ಸಚಿನ್ ಕ್ಷೀರಸಾಗರ, ಮಂಜುನಾಥ ಯಂಟಮಾನ, ಸಿದ್ಧಲಿಂಗ ಕ್ಷೇಮಶೆಟ್ಟಿ, ಬಂದೇನವಾಜ್ ನಾದ, ಆರಕ್ಷಕ ಮೌಲಾಲಿ ಆಲಗೂರ ಸೇರಿದಂತೆ ಅನೇಕರಿದ್ದರು.

# ವಿಧಾನಸಭೆ ಸಭಾಪತಿ ಯು.ಟಿ.ಖಾದರ್ ರಿಗೆ ಸನ್ಮಾನ



■ ಉದಯರಶ್ಮಿ ದಿನಪತ್ರಿಕೆ

ಬಸವನಬಾಗೇವಾಡಿ: ಪಟ್ಟಣದ ಬಸವಭವನದಲ್ಲಿ ಶನಿವಾರ ತಾಜ್ ಸೋಶಿಯಲ್ ಗ್ರುಫ್ ಹಮ್ಮಿಕೊಂಡಿದ್ದ ಸೌಹಾರ್ದ ಸಮಾವೇಶದಲ್ಲಿ ಭಾಗವಹಿಸಲು ಆಗಮಿಸಿದ್ದ ಕರ್ನಾಟಕ ವಿಧಾನಸಭೆಯ ಸಭಾಪತಿ ಯು.ಟಿ. ಖಾದರ್ ಅವರನ್ನು ಬಸವೇಶ್ವರ ದೇವಸ್ಥಾನದ ಆವರಣದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರು ರಾಜ್ಯದ ಸಾಂಸ್ಕೃತಿಕ ನಾಯಕ ಬಸವೇಶ್ವರರ ಭಾವಚಿತ್ರ ನೀಡುವ ಮೂಲಕ ಸನ್ಮಾನಿಸಿದರು. ಈ ಸಂದರ್ಭದಲ್ಲಿ ನಂದಿ ಸಕ್ಕರೆ ಕಾರ್ಖಾನೆಯ ನಿರ್ದೇಶಕ ಸತ್ಯಜೀತ್ ಪಾಟೀಲ, ಕೆಪಿಸಿಸಿ ವಕ್ತಾರ ನಿಕಿತರಾಜ್ ಮೌರ್ಯ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸುರೇಶ ಹಾರಿವಾಳ, ರಾಜ್ಯ ಸಹಕಾರ ಮಹಾಮಂಡಳ ನಿರ್ದೇಶಕ ಐ.ಸಿ.ಪಟ್ಟಣಶೆಟ್ಟಿ, ಎಪಿಎಂಸಿ ಮಾಜಿ ಅಧ್ಯಕ್ಷ ಶೇಖರ ಗೊಳಸಂಗಿ, ಬಸವೇಶ್ವರ ಸೇವಾ ಸಮಿತಿ ಉಪಾಧ್ಯಕ್ಷ ಬಸವರಾಜ ಹಾರಿವಾಳ, ರಾಷ್ಟ್ರೀಯ ಬಸವಸೈನ್ಯ ಸಂಸ್ಥಾಪಕ ಅಧ್ಯಕ್ಷ ಶಂಕರಗೌಡ ಬಿರಾದಾರ, ಕಾಂಗ್ರೆಸ್ ಪಕ್ಷದ ಎಸ್ಸಿ ಘಟಕದ ಅಧ್ಯಕ್ಷ ಪರಶುರಾಮ ಜಮಖಂಡಿ, ಪುರಸಭೆ ಸದಸ್ಯರಾದ ಜಗದೇವಿ ಗುಂಡಳ್ಳಿ, ಪ್ರವೀಣ ಪೂಜಾರಿ, ನಜೀರ ಗಣಿ,ಟಿಎಪಿಎಂಸಿ ಅಧ್ಯಕ್ಷ ಚಂದ್ರಶೇಖರಗೌಡ ಪಾಟೀಲ, ಬ್ಲಾಕ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ರವಿ ರಾಠೋಡ, ಬಸವೇಶ್ವರ ದೇವಾಲಯ ಇಂಟರ್ನ್ಯಾಷನಲ್ ಶಾಲೆಯ ಸಲಹಾ ಸಮಿತಿ ಅಧ್ಯಕ್ಷ ಅನಿಲ ಅಗರವಾಲ, ಪಂಚಮಸಾಲಿ ಸಮಾಜ ತಾಲೂಕಾಧ್ಯಕ್ಷ ಬಸವರಾಜ ಗೊಳಸಂಗಿ, ಮುಖಂಡರಾದ ಬಸವರಾಜ ಕೋಟಿ, ಕಮಲಸಾಬ ಕೊರಬು, ಜಟ್ಟಿಂಗರಾಯ ಮಾಲಗಾರ, ಎಂ.ಜಿ.ಆದಿಗೊಂಡ, ಸಂಕನಗೌಡ ಪಾಟೀಲ, ಡಾ.ನದಾಫ್, ನಜೀರ ಗಣಿ, ಕಾಶೀನಾಥ ರಾಠೋಡ,ಮಹಾಂತೇಶ ಸಾಸಾಬಾಳ, ಸಿದ್ರಾಮ ಪಾತ್ರೋಟಿ, ಸಂಜೀವ ಕಲ್ಯಾಣಿ, ಶರಣಪ್ಪ ಬೆಲ್ಲದ, ರಮಜಾನ ಹೆಬ್ಬಾಳ, ಭದ್ರು ಮಣ್ಣೂರ ಇದ್ದರು.

# ಅತಿಕ್ರಮ ಡಬ್ಬಾ ಅಂಗಡಿಗಳ ತೆರವು ಕಾರ್ಯಾಚರಣೆ

■ ಉದಯರಶ್ಮಿ ದಿನಪತ್ರಿಕೆ



ಮುದ್ದೇಬಿಹಾಳ: ಪಟ್ಟಣದಲ್ಲಿ ರವಿವಾರ ಬೆಳ್ಳಂಬೆಳಿಗ್ಗೆ ಪುರಸಭೆಯ ವತಿಯಿಂದ ಪೋಲೀಸರ ಸರ್ಪಗಾವಲಿನಲ್ಲಿ ಎರಡು ಜೆಸಿಬಿಗಳು ಘರ್ಜಿಸಿವೆ.

ಇಲ್ಲಿನ ತಂಗಡಗಿ ರಸ್ತೆಯ ಜ್ಞಾನ ಭಾರತಿ ಶಾಲೆಯಿಂದ ಅಂಬೇಡ್ಕರ್ ವೃತ್ತ ಮತ್ತು ರಿಲಯನ್ಸ್ ಪೆಟ್ರೋಲ್ ಪಂಪ ವರೆಗೆ ಮುಖ್ಯ ರಸ್ತೆಯಲ್ಲಿ ಪುರಸಭೆ ಜಾಗೆಯನ್ನು ಅತಿಕ್ರಮಣ ಮಾಡಿದ ಡಬ್ಬಾ ಅಂಗಡಿಗಳ ತೆರವು ಕಾರ್ಯಾಚರಣೆಯಲ್ಲಿ ಪುರಸಭೆ ಸಫಲವಾಗಿದೆ. ಹಲವು ದಿನಗಳಿಂದ ಪುರಸಭೆ ರಸ್ತೆಯನ್ನು ಅತಿಕ್ರಮಿಸಿ ಕೆಲವು ಡಬ್ಬಾ ಅಂಗಡಿಗಳು, ಗೂಡಂಗಡಿಗಳು ತಮ್ಮ ದೈನಂದಿನ ವ್ಯಾಪಾರ ವಹಿವಾಟುಗಳನ್ನು ನಡೆಸಿದ್ದರು. ಇದರ ಪರಿಣಾಮ ವಾಹನ ಸಂಚಾರಕ್ಕೆ, ದ್ವಿಚಕ್ರ ಮತ್ತು ನಾಲ್ಕು ಚಕ್ರಗಳ ವಾಹನ ನಿಲುಗಡೆಗೆ ಸಾಕಷ್ಟು ತೊಂದರೆಯಾಗಿತ್ತು. ಹಲವೆಡೆ ಪ್ರಮುಖ ರಸ್ತೆಗಳನ್ನು ಬಂದ್ ಮಾಡಿ ಡಬ್ಬಾ ಅಂಗಡಿಗಳನ್ನಿಟ್ಟು ವ್ಯವಸ್ಥಿತವಾಗಿ ನಡೆಸಲಾಗುತ್ತಿತ್ತು. ಅಲ್ಲದೇ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಭಯಾನಕ ಅಪಘಾತಗಳು ನಡೆದು ಶಾಲಾ ಮಕ್ಕಳ, ಯುವಕರ, ವೃದ್ಧರ ಸಾವುಗಳು ಆಗಿದ್ದವು. ಇದೆಲ್ಲ ಸಮಸ್ಯೆಗಳಿಗೆ ಪರಿಹಾರವಾಗಿ ಈ ಕಾರ್ಯಾಚರಣೆ ನಡೆಸಿರುವದಾಗಿ ಪುರಸಭೆ ಮೂಲಗಳಿಂದ ತಿಳಿದು ಬಂದಿದೆ. ಕಳೆದ ಕೆಲವು ದಿನಗಳಿಂದ ಅಟೋ ಮೂಲಕ ಪಟ್ಟಣದಲ್ಲಿ ಅತಿಕ್ರಮಿತ ರಸ್ತೆಗಳ ತೆರವು ಕಾರ್ಯಾಚರಣೆ ಕೈಗೊಳ್ಳುವದಾಗಿ ದಿನಾಂಕ ಸಮೇತ ತಿಳಿಸಿದರೂ ಬಹುತೇಕರು ತಮ್ಮ ಅಂಗಡಿಗಳನ್ನು ತೆರವುಗೊಳಿಸಿರಲಿಲ್ಲ. ಕಾರ್ಯಾಚರಣೆ ವೇಳೆ ಯಾರ ಮುಲಾಜಿಗೂ ಒಳಗಾಗದೇ ತೆರವುಗೊಳಿಸಿದ್ದು ಪಟ್ಟಣದ ಸುಂದರತೆಯನ್ನು ಬಯಸುವವರ ಶ್ಲಾಘನೆಗೆ ಕಾರಣವಾಗಿದೆ. ಈ ಕಾರ್ಯಾಚರಣೆ ಸೋಮುವಾರವೂ ಮುಂದುವರೆಯಲಿರುವದಾಗಿ ಪುರಸಭೆಯವರು ತಿಳಿಸಿದ್ದಾರೆ. ಪಟ್ಟಣದ ಬಸವೇಶ್ವರ ವೃತ್ತದಿಂದ ಮುಖ್ಯ ಬಜಾರ, ಇಂದಿರಾ ವೃತ್ತ, ಖಾದಿ ಕೇಂದ್ರ, ಆಲಮಟ್ಟಿ ರಸ್ತೆಯಲ್ಲಿ ಕಾರ್ಯಾಚರಣೆ ಮುಂದುವರೆಯಲಿದೆ.

## ಬೆಳಕಿಗೆ ಬಂದ ಅತಿಕ್ರಮಣ ರಸ್ತೆ

ಪಟ್ಟಣದ ಬಸ್ ನಿಲ್ದಾಣದ ಎದುರು ಪಿಎಲ್‌ಡಿ ಬ್ಯಾಂಕ್ ನ ಮಳಿಗೆಗಳಿಗೆ ಹೊಂದಿಕೊಂಡು ಹಲವು ವರ್ಷಗಳಿಂದ ಪಾನ್ ಅಂಗಡಿಯೊಂದನ್ನಿಟ್ಟು ಪ್ರಮುಖ ರಸ್ತೆಯೊಂದನ್ನ ಅತಿಕ್ರಮಿಸಲಾಗಿತ್ತು. ಹಿಂದೆ ಹಲವಾರು ತೆರವು ಕಾರ್ಯಾಚರಣೆಗಳು ನಡೆದರೂ ಈ ರಸ್ತೆ ಬೆಳಕಿಗೆ ಬಂದಿರಲಿಲ್ಲ. ರವಿವಾರ ನಡೆದ ಕಾರ್ಯಾರಣೆಯಲ್ಲಿ ಇಲ್ಲಿ ರಸ್ತೆ ಇರುವದು ಬೆಳಕಿಗೆ ಬಂದಿದ್ದು ಇನ್ನೂ ಈ ರಸ್ತೆಯಲ್ಲಿ ಅತಿಕ್ರಮಣ ಕಟ್ಟಡಗಳು ಇದ್ದು ಅವುಗಳನ್ನು ತೆರವುಗೊಳಿಸಿ ಸಾರ್ವಜನಿಕರ ಸಂಚಾರಕ್ಕೆ ಅನುವು ಮಾಡಿಕೊಡುವಂತೆ ಹಲವರು ಒತ್ತಾಯಿಸಿದ್ದಾರೆ.

## ಬೆಂಗಳೂರು ಬೇಕರಿಯತ್ತ ಬೆರಳು

ತೆರವು ಕಾರ್ಯಾಚರಣೆಯ ಬಳಿಕ ಕೆಲವರು ಇಲ್ಲಿನ ಹುಡ್ಕೋ ಗೇಟ್ ಬಳಿ ಇರುವ ಬೆಂಗಳೂರು ಬೇಕರಿಯತ್ತ ಬೆರಳು ಮಾಡಿದರು. ಪುರಸಭೆ ಕಾಯ್ದೆಯ ವಿರುದ್ಧವಾಗಿ ಈ ಬಿಲ್ಡಿಂಗ್ ಕಟ್ಟಲಾಗಿದ್ದು ಅಲ್ಲದೇ ಬಿಲ್ಡಿಂಗ್ ನ ಮಧ್ಯ ಭಾಗದಲ್ಲಿರುವ ಸರ್ಕಾರಿ ರಸ್ತೆಯನ್ನೇ ನುಂಗಿಹಾಕಲಾಗಿದೆ. ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಲ್ಲಿ ಪುರಸಭೆ ಹಿಂದೇಟು ಹಾಕಿದೆ. ಬಡವರ ಅಂಗಡಿ ಕಿತ್ತೋದು ಬಂದ್ರೆ ಮಾತ್ರ ಇವರಿಗೆ ಕಾನೂನು ಶ್ರೀಮಂತರಿಗೆ ಯಾವ ಕಾನೂನುಗಳು ಇಲ್ಲವೇ? ಪುರಸಭೆ ಮುಖ್ಯಾಧಿಕಾರಿಗಳು ಕೂಡಲೇ ಇದರ ವಿರುದ್ಧ ಕ್ರಮ ಕೈಗೊಳ್ಳದೇ ಹೋದಲ್ಲಿ ಅವರ ವಿರುದ್ಧ ಕಾನೂನು ಹೋರಾಟ ನಡೆಸುತ್ತೇವೆ ಎಂದು ಕೆಲವರು ಎಚ್ಚರಿಸಿದರು.

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR